# ತಾಯಿ ಋಣ ತೀರಿಸುವುದು ಅಸಾಧ್ಯ




**ಧಾರವಾಡ :** ತಾಯಿಯ ಪ್ರೀತಿ, ಮಮತೆ, ಕರುಣೆ, ವಾತ್ಸಲ್ಯ ಅಪಾರ. ಇದನ್ನು ಪದಗಳಲ್ಲಿ ವಣಿಸುವುದು ಅಸಾಧ್ಯ ಎಂದು ನಿವೃತ್ತ ಪ್ರಾಧ್ಯಾಪಕಿ ಡಾ.ಸುರೇಖಾದೇವಿ ಹೇಳಿದರು.

ನಗರದ ಅಂಜುಮನ್ ಕಲಾ, ವಿಜ್ಞಾನ-ವಾಣಿಜ್ಯ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರ ಸಹಯೋಗದಲ್ಲಿ ನಡೆದ ತಾಯಂದಿರ ದಿನಾಚರಣೆಯಲ್ಲಿ ಮಾತನಾಡಿದರು.

ನಿಸ್ವಾರ್ಥ ಜೀವನ ನಡೆಸುವ ತಾಯಿ ಮಕ್ಕಳ ಏಳಿಗೆ ಬಯಸುತ್ತಾಳೆ. ಎಲ್ಲ ಗೌರವಕ್ಕೆ ಅರ್ಹಳಾದ ತಾಯಿ ಯೋಗ್ಯ ರೀತಿ ನೋಡಿಕೊಳ್ಳುವ ಜವಾಬ್ದಾರಿ ಮಕ್ಕಳ ಮೇಲಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ ಎನ್ ಎಂ ಮಕಾನದಾರ ಮಾತನಾಡಿ, ತಾಯಿ ಗುಣ ವಣಿಸಿತ್ತ, ಅವಳ ಋಣ ತೀರಿಸುವುದು ಅಸಾಧ್ಯ ಎಂದರಲ್ಲದೇ, ತಾಯಿ ಬಗ್ಗೆ ಕಾವ್ಯ ಪ್ರಸ್ತುತಪಡಿಸಿದರು.

ವೇದಿಕೆಯಲ್ಲಿ ಪ್ರಾಧ್ಯಾಪಕರಾದ ಡಾ.ರಾಹುತ್ ಉನ್ನಿಸಾ, ಡಾ.ಎ.ಎಸ್. ಬಳ್ಳಾರಿ, ಡಾ.ಎನ್.ಬಿ.ನಾಲತವಾಡ, ಪತ್ರಿಕೋದ್ಯಮ ಮುಖ್ಯಸ್ಥ ಡಾ. ಎಸ್ ಎಸ್ ಅದೋನಿ ಪ್ರೊ.ಶಮಿಮ್ ಕಲಬುರ್ಗಿ ಸೇರಿ ಅನೇಕರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಸಾಹಿಲ್ಲಾ ಪಠಾಣ ಕುರಾನ್ ಹಾಗೂ ಮಹಬ್ಬುನಿ ದಪೇದಾರ ಶ್ಲೋಕ ಪಠಿಸಿದರು. ಪ್ರೊ.ಶಮೀಮ್ ಕಲಬುರ್ಗಿ ನಿರೂಪಿಸಿದರು. ಪ್ರೊ.ಸೀರಿನ ಶಿರಗುಪ್ಪಿನ ವಂದಿಸಿದರು.

# ಅಪಘಾತದಲ್ಲಿ ಜಖಂ ಆದ RENAULT KWID CARಗೆ ನ್ಯೂ ಇಂಡಿಯಾ ಅಸುರೆನ್ಸ್ ಕಂಪನಿಯಿಂದ ರೂ.3 ಲಕ್ಷ ಬಡ್ಡಿ ಸಮೇತ ಕೊಡಲು ಆಯೋಗದ ಆದೇಶ

**ಧಾರವಾಡ :** ಧಾರವಾಡ ಬಸವ ನಗರದ ಶ್ರೀ. ವಿನಯ ಕ್ಷತ್ರಿಯ ಇವರು ತಮ್ಮ ಸ್ವಂತ ಕೆಲಸಕ್ಕಾಗಿ ಖಇಓಂಗಐಖ ಏಫಋಆ ಅಂಖ ಖರೀದಿಸಿ ಅದಕ್ಕೆ ಎದುರುದಾರರ ಬಳಿ ರೂ.6,750/- ಹಣ ಪಾವತಿಸಿ ವಿಮೆಯನ್ನು ಪಡೆದಿದ್ದರು. ಆ ವಿಮೆಯಲ್ಲಿ ವಾಹನದ ಆಯ್.ಡಿ. ಮೌಲ್ಯ ರೂ.3 ಲಕ್ಷ ಅಂತಾ ನಮೂದಿಸಿತ್ತು. ದಿ:31/05/2022 ರಂದು ವಾಹನವು ಧಾರವಾಡ ಉದಯ ಹಾಸ್ಟೇಲ್ ಬಳಿ ಅಪಘಾತಕ್ಕೀಡಾಗಿ ದೂರುದಾರರು ಪಾಲಸಿಯ ನಿಯಮದಂತೆ ಕಾರಿನ ರಿಪೇರಿಗಾಗಿ ಎದುರುದಾರರ ಬಳಿ ಎಲ್ಲ ದಾಖಲೆಗಳನ್ನು ಪಾವತಿಸಿದ್ದರು. ಎದುರುದಾರರು ಅಪಘಾತ ಸಮಯದಲ್ಲಿ ವಾಹನವನ್ನು ಮದ್ಯ ಸೇವಿಸಿ ಚಲಾಯಿಸಿದ್ದಾರೆ ಅಂತಾ ಹೇಳಿ ವಿಮಾ ಹಣವನ್ನು ಕೊಡಲು ನಿರಾಕರಿಸಿದ್ದರು.

ವಿಮಾ ಕಂಪನಿಗೆ ಹಲವು ಬಾರಿ ವಿಮೆ ಹಣವನ್ನು ಪಾವತಿಸಲು ಕೇಳಿಕೊಂಡರೂ ಎದುರುದಾರರು ತಮಗೆ ವಿಮಾ ಹಣ ಅಥವಾ ಪರಿಹಾರ ಕೊಟ್ಟಿಲ್ಲ. ಅಂತಹ ವಿಮಾ ಕಂಪನಿಯವರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ದೂರುದಾರರು ದಿ:03/06/2023 ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು. ಸದರಿ ದೂರಿನ ಬಗ್ಗೆ ಆಯೋಗದ ಅಧ್ಯಕ್ಷರಾದ ಈಶಪ್ಪ.ಭೂತೆ, ವಿಶಾಲಾಕ್ಷಿ. ಅ. ಬೋಳಶೆಟ್ಟಿ ಹಾಗೂ ಪ್ರಭು.ಸಿ.ಹಿರೇಮಠ ಸದಸ್ಯರು, ಕೂಲಂಕುಷವಾಗಿ ವಿಚಾರಣೆ ನಡೆಸಿದರು. ದೂರುದಾರರು ಕೊಟ್ಟಂತಹ ದಾಖಲೆಗಳನ್ನು ಪರಿಶೀಲಿಸಿದಾಗ ಅಪಘಾತವಾದ ಸಮಯದಲ್ಲಿ ದೂರುದಾರನು ಮದ್ಯ ಸೇವಿಸಿ ವಾಹನ ಚಲಾಯಿಸಿಲ್ಲ ಅನ್ನುವ ವಿಷಯ ಸ್ಪಷ್ಟವಾಗಿರುತ್ತದೆ ಮತ್ತು ಪ್ರಥಮ ವರ್ತಮಾನ ವರದಿಯಲ್ಲಿ ಇದರ ಬಗ್ಗೆ ಹೇಳಿಕೆಯಿಲ್ಲದೇ ಇರುವುದು ಕಂಡು ಬಂದದ್ದರಿಂದ ದೂರುದಾರರು ಕೇಳಿದಂತಹ ವಿಮಾ ಹಣ ರೂ.3 ಲಕ್ಷ ಪಡೆಯಲು ಅರ್ಹರಿದ್ದಾರೆಂದು ಆಯೋಗವು ಅಭಿಪ್ರಾಯ ಪಟ್ಟಿದೆ.

ಜೊತೆಗೆ ಅವರು ಅನುಭವಿಸಿದ ಮಾನಸಿಕ ಹಿಂಸೆ ಹಾಗೂ ಅನಾನುಕೂಲತೆಗೆ ರೂ. 50,000/- ಪರಿಹಾರ ಮತ್ತು ರೂ.10,000/- ಪ್ರಕರಣದ ಖರ್ಚು ವೆಚ್ಚ ಕೊಡುವಂತೆ ಧಾರವಾಡದ ದಿ ನ್ಯೂ ಇಂಡಿಯಾ ಅಸುರೆನ್ಸ್ ಕಂಪನಿಗೆ ಆಯೋಗ ಆದೇಶಿಸಿದೆ.

# ವಿವಿಧ ಪ್ರಗತಿಪರ ಸಂಘಟನೆಗಳಿಂದ ಸಾಥ್ * ರಸ್ತೆ ತಡೆದು ಪ್ರತಿಭಟನೆ

# ಅಂಜಲಿ ಹತ್ಯೆ ಖಂಡಿಸಿ ತಾಳಿಕೋಟೆಯಲ್ಲಿ ಬೃಹತ್ ಪ್ರತಿಭಟನೆ





**ತಾಳಿಕೋಟೆ :** ಹುಬ್ಬಳ್ಳಿಯಲ್ಲಿ ಅಂಜಲಿ ಅಂಬಿಗೇರ ಯುವತಿಯ ಹತ್ಯೆಯನ್ನು ಖಂಡಿಸಿ ತಾಳಿಕೋಟೆ ತಾಲೂಕಾ ನಿಜಶರಣ ಅಂಬಿಗೇರ ಚೌಡಯ್ಯ ಸಮಾಜ ಕ್ಷೇಮಾಭಿವೃದ್ಧಿ ಸಂಘ ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳ ಸಹಯೋಗದೊಂದಿಗೆ ಸೋಮವಾರರಂದು ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತಲ್ಲದೇ ಬಸವೇಶ್ವರ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ರಸ್ತೆ ತಡೆದು ಸರ್ಕಾರದ ವಿರೂದ್ಧ ಜನರು ಆಕ್ರೋಶವನ್ನು ಹೊರಹಾಕಿದರು.

ಪ್ರತಿಭಟನಾ ನೇತೃತ್ವ ವಹಿಸಿದ ಬಿಜೆಪಿ ಜಿಲ್ಲಾ ಅಧ್ಯಕ್ಷ ಆರ್.ಎಸ್.ಪಾಟೀಲ(ಕೂಚಬಾಳ) ಅವರು ಮಾತನಾಡಿ ಹುಬ್ಬಳ್ಳಿಯಲ್ಲಿ ನೇಹಾ ಹಿರೇಮಠ ಹತ್ಯೆ ಪ್ರಕರ್ಣ ಮಾಸುವ ಮುನ್ನವೇ ಮತ್ತೊಂದು ಪ್ರಕರ್ಣ ಅಂಜಲಿ ಅಂಬಿಗೇರ ಎಂಬ ಬಾಲಕಿಯನ್ನು ಹತ್ಯೆ ಮಾಡುವದರೊಂದಿಗೆ ಕ್ರೂರತನ ಮೆರೆದಿರುವದು ಅತ್ಯಂತ ಖಂಡಿಂುವಾದಂತಹದ್ದಾಗಿದೆ ನಮ್ಮನಾಳುವ ಸರ್ಕಾರಗಳು ಕಾನೂನು ವಿರೂದ್ದವಾಗಿ ಕ್ರೂರವಾಗಿ ನಡೆದುಕೊಳ್ಳುವವರಿಗೆ ಕಠಿಣವಾದ ಶಿಕ್ಷೆ ಕೊಡಿಸುವಂತಹ ಕೆಲಸ ಮಾಡಬೇಕು ಗ್ರಹ ಸಚೀವರು ಮತ್ತು ಮುಖ್ಯಮಂತ್ರಿಗಳು ವೈಯಕ್ತಿಕ ಕಾರಣಗಳಿಂದ ಈ ಘಟನೆ ನಡೆದಿದೆ ಎಂದು ಹಾರಿಕೆ ಉತ್ತರಗಳನ್ನು ನೀಡಿರುವದು ಸರ್ಕಾರದ ಮೇಲೆ ಜನರ ವಿಸ್ವಾಸ ಕಳೆದುಕೊಳ್ಳುವಂತಾಗಿದೆ ಅಲ್ಲದೇ ಹಂತಕರಿಗೆ ಹಿಂಬಾಗಿಲಿನಿಂದ ಬೆಂಬಲವಾಗಿ ರಾಜ್ಯ ಸರ್ಕಾರ ನಿಲ್ಲುತ್ತಿದೆ ಎಂಬುದು ಎದ್ದು ಕಾಣುತ್ತಿದೆ ಅಂಜಲಿ ಅಂಬಿಗೇರ ಮತ್ತು ನೇಹಾ ಹಿರೇಮಠ ಅವರನ್ನು ಕಳೆದುಕೊಂಡ ಕುಟುಂಭಗಳು ಅತ್ಯಂತ ರೋಧನಾ ಸ್ಥಿತಿಯಲ್ಲಿ ಮುಳಗಿವೆ ಕರ್ನಾಟಕದ ಪೋಲೀಸ್‌ರು ಸಮರ್ಥರಾಗಿದ್ದಾರೆ ಅವರಿಗೆ ಸಂಪೂರ್ಣ ಸ್ವಾತಂತ್ರ್ಯ ಕೊಟ್ಟರೆ ಇಂತಹ ಘಟನೆಗಳು ನಡೆಯುವದಿಲ್ಲಾ ಆದರೆ ಅವರ ಮೇಲೆ ಆಳುವ ಸರ್ಕಾರಗಳು ಒತ್ತಡ ಹೇರುವದರೊಂದಿಗೆ ಘಟನೆಗಳನ್ನು ಮರೆಮಾಚುವಂತಹ ಕೆಲಸ ನಡೆದಿರುವದು ಅತ್ಯಂತ ಖೇದನಿಯ ಸಂಗತಿಯಾಗಿದೆ ಕಾಂಗ್ರೇಸ್‌ನ ಕಾರ್ಪೂರೇಟ್ಟರ್ ಅವರೇ ಹೇಳುತ್ತಿದ್ದಾರೆ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟು ಹೋಗಿದೆ ಕರ್ನಾಟಕಕ್ಕೂ ಯೋಗಿ ಅಂತಹ ಮುಖ್ಯಮಂತ್ರಿ ಬಂದರೆ ಎಲ್ಲವೂ ಸರಿಹೋಗಲಿದೆ ಎಂದು ಹೇಳಿದ್ದಾರೆಂದ ಅವರು ಕ್ರೈಂಬೀರೋದವರು ಸರ್ಕಾರಕ್ಕೆ ವರಧಿಯನ್ನು ನೀಡಿದ್ದಾರೆ ಕಳೆದ 4 ತಿಂಗಳಲ್ಲಿ ಶೇ.70 ರಷ್ಟು ಅಪರಾಧ ಪ್ರಕರ್ಣಗಳು ಕರ್ನಾಟಕದಲ್ಲಿ ಹೆಚ್ಚಾಗಿವೆ ಎಂದು ಹೇಳಿದ್ದಾರೆ ಇದರಿಂದ ಎಲ್ಲರಿಗೂ ಗೊತ್ತಾಗಲಿದೆ ರಾಜ್ಯದಲ್ಲಿಯ ಕಾನೂನು ಸುವ್ಯವಸ್ಥೆ ಯಾವ ಮಟ್ಟಿಗೆ ಕುಸಿದು ಹೋಗಿದೆ ಎಂಬುದು ಇಂತಹ ಘಟಕನೆಗಳು ಮರುಕಳಿಸಬಾರದೆಂದರೆ ಆರೋಪಿತರಿಗೆ ಕಠಿಣವಾದ ಗಲ್ಲು ಶಿಕ್ಷೆಯನ್ನು ವಿದಿಸಬೇಕು ಆರೋಪಿಯ ಕುಟುಂಭದ ಎಲ್ಲ ಆಸ್ತಿಯನ್ನು ಸರ್ಕಾರವು ಮುಟ್ಟುಗೋಲು ಹಾಕಿಕೊಳ್ಳಬೇಕು ಅಂದಾಗ ಅಪರಾದ ಕ್ರಮಗಳು ಕಡಿಮೆಯಾಗಲು ಸಾದ್ಯವಾಗುತ್ತದೆ ರಾಜ್ಯ ಸರ್ಕಾರವು ಕೂಡಲೇ ಅಂಜಲಿ ಅಂಬಿಗೇರ ಅವರ ಕುಟುಂಭಕ್ಕೆ 25 ಲಕ್ಷ ರೂ. ಪರಿಹಾರವನ್ನು ನೀಡಬೇಕು ಮತ್ತು ಅವರ ಕುಟುಂಭಕ್ಕೆ ಸಂಪೂರ್ಣ ಬದ್ರತೆಯನ್ನು ಒದಗಿಸಬೇಕೆಂದು ಒತ್ತಾಯಿಸಿದರು.

ಇನ್ನೋರ್ವ ಪ್ರತಿಭಟನಾ ಮೇರವಣಿಗೆಯ ನೇತೃತ್ವ ವಹಿಸಿದ ಗುಂಡಕನಾಳ ಹಿರೇಮಠ ಶ್ರೀ ಗುರುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ ಆಡಳಿತ ಮಾಡುವ ರಾಜ್ಯ ಸರ್ಕಾರದ ಬೇಜವಾಬ್ದಾರಿ ವರ್ತನೆಯಿಂದ ದಿನದಿಂದ ದಿನಕ್ಕೆ ರಾಜ್ಯದಲ್ಲಿ ಕೊಲೆ ಸುಲಿಗೆ ಅತ್ಯಾಚಾರ ಪ್ರಕರ್ಣಗಳು ಹೆಚ್ಚಾಗಲಿಕ್ಕೆ ಹತ್ತಿವೆ ನೇಹಾ ಹಿರೇಮಠ ವಿದ್ಯಾರ್ಥಿಯನ್ನು ಕಾಲೇಜ್ ಕ್ಯಾಂಪಸ್ಸಿನಲ್ಲಿ ಹಾಡು ಹಗಲೆ ಹತ್ಯೆ ಮಾಡಿದ ತಕ್ಷಣವೇ ಸರ್ಕಾರ ಎಚ್ಚೆತ್ತುಕೊಂಡು ಆರೋಪಿಗೆ ಕಠಿಣ ಶಿಕ್ಷೆಗೆ ಮುಂದಾಗಿದ್ದರೆ ಅಂಜಲಿ ಅಂಬಿಗೇರ ಹತ್ಯೆ ಪ್ರಕರ್ಣ ನಡೆಯುತ್ತಿದ್ದಿಲ್ಲಾ ಆದರೆ ರಾಜ್ಯ ಸರ್ಕಾರದ ಮಂತ್ರಿಗಳು ಕುಚೇಷ್ಠಿಗಳಿಗೆ ಇನ್ನಷ್ಟು ಪುಷ್ಠಿ ನೀಡುವ ಹಾಗೆ ಹೇಳಿಕೆಗಳನ್ನು ನೀಡಿ ಅವರ ರಕ್ಷಣೆಗೆ ಮುಂದಾಗುವ ರೀತಿಯಲ್ಲಿ ನಡೆದುಕೊಳ್ಳುತ್ತಿರುವದು ಖಂಡನೀಯವಾಗಿದೆ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟು ಹೋಗಿದೆ ಕೂಡಲೇ ನೇಹಾ ಹಿರೇಮಠ ಕೊಲೆ ಮಾಡಿದ ಆರೋಪಿಗೆ ಮತ್ತು ಅಂಜಲಿ ಅಂಬಿಗೇರ ಹತ್ಯೆ ಮಾಡಿದ ಆರೋಪಿಗೆ ಎನ್ ಕೌಂಟರ್ ಮಾಡಿ ಬಿಸಾಕಬೇಕು ಇಲ್ಲಾ ವಿಶೇಷ ಕಾನೂನಿನಡಿ ಗಲ್ಲು ಶಿಕ್ಷೆ ವಿದಿಸಿ ಇಂತಹ ಪ್ರಕರ್ಣಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕೆಂದು ಮುದ್ದೇಬಿಹಾಳ ಮತ್ತು ತಾಳಿಕೋಟೆ ತಾಲೂಕಿನ ಎಲ್ಲ ಮಠಾಧೀಶರ ಒಕ್ಕೂಟದ ಪರವಾಗಿದೆ ಒತ್ತಾಯಿಸುತ್ತೇನೆಂದರು.

ಇನ್ನೋರ್ವ ತಾಳಿಕೋಟೆ ತಾಲೂಕಾ ನಿಜಶರಣ ಅಂಬಿಗೇರ ಚೌಡಯ್ಯ ಸಮಾಜ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಪರಶುರಾಮ ತಂಗಡಗಿ ಅವರು ಮಾತನಾಡಿ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗುತ್ತಾ ಸಾಗಿದೆ ಅಪರಾದಿಗಳಿಗೆ ಯಾವುದೇ ಅಂಜಿಕೆ ಇಲ್ಲದಂತಾಗಿದೆ ಸರ್ಕಾರದ ಮಂತ್ರಿಗಳು ನೀಡಿದ ಹೇಳಿಕೆಗಳು ಅಪರಾಧಿಗಳಿಗೆ ಇನ್ನಷ್ಟು ಪುಷ್ಠಿ ನೀಡಿದಂತಾಗುತ್ತಿದ್ದು ಕೂಡಲೇ ಸರ್ಕಾರವು ಎಚ್ಚೆತ್ತುಕೊಂಡು ಅಂಜಲಿ ಅಂಬಿಗೇರ ಯುವತಿಯ ಹತ್ಯೆಗೈದ ಆರೋಪಿಗೆ ಗಲ್ಲು ಶಿಕ್ಷೆ ವಿದಿಸಬೇಕು ಮಹಿಳೆಯರ ರಕ್ಷಣೆಗೆ ವಿಶೇಷ ಕಾನೂನನ್ನು ಜಾರಿಗೆ ತರಬೇಕೆಂದು ಒತ್ತಾಯಿಸಿದರು.

ರಾಜ್ಯ ಬುಡಕಟ್ಟು ಜನಾಂಗ ಸಂರಕ್ಷಣಾ ಸಮಿತಿಯ ರಾಜ್ಯಾಧ್ಯಕ್ಷ ಅಮರಣ್ಣ ಕಾಮನಕೇರಿ, ಕರವೇ ಸಂಘಟನೆಯ ಜೈಭೀಮ ಮುತ್ತಗಿ, ಶಿವರಾಜ ಗುಂಡಕನಾಳ, ಅವರು ಮಾತನಾಡಿದರು.

ಪ್ರತಿಭಟನಾ ಮೇರವಣಿಗೆಯು ಬಸವೇಶ್ವರ ವೃತ್ತದಿಂದ ಪ್ರಾರಂಭಗೊಂಡು ಡಾ.ಬಿ.ಆರ್. ಅಂಬೇಡ್ಕರ್ ಸರ್ಕಲ್, ಕತ್ರಿ ಭಜಾರ, ವಿಠ್ಠಲ ಮಂದಿರ ರಸ್ತೆ, ಶಿವಾಜಿ ಮಹಾರಾಜರ ವೃತ್ತ, ಮಹಾರಾಣಾಪ್ರತಾಪಸಿಂಹ ಸರ್ಕಲ್, ಬಸ್ ನಿಲ್ದಾಣದ ಮುಂಬಾಗದ ರಸ್ತೆಗುಂಟಾ ಹಾಯ್ದು ಬಸವೇಶ್ವರ ಸರ್ಕಲ್‌ಕ್ಕೆ ಆಗಮಿಸಿ ಮಾನವ ಸರಪಳಿ ನಿರ್ಮಿಸಿ ಕೆಲ ಗಂಟೆಕಾಲ ರಸ್ತೆ ತಡೆ ನಡೆಸಲಾಯಿತು.

ಮನವಿ ಪತ್ರವನ್ನು ತಹಶಿಲ್ದಾರ ಶ್ರೀಮತಿ ಕೀರ್ತಿ ಚಾಲಕ ಅವರಿಗೆ ಪ್ರತಿಭಟನಾ ನಿರತರು ಸಲ್ಲಿಸಿದರು.

ಈ ಸಮಯದಲ್ಲಿ ಮುಖಂಡರುಗಳಾದ ಎಂ.ಎಚ್.ಜೂಲಿ, ಎನ್.ಎಸ್.ಬಳಿಗಾರ, ವಿಠ್ಠಲ ಮೋಹಿತೆ, ಎಂ.ಡಿ.ನಾಯ್ಕೋಡಿ, ಎಂ.ಎಸ್.ಮದ್ದರಕಿ, ಬಿ.ಎಲ್.ತಳವಾರ, ಚಂದ್ರು ಗೊರಗುಂಡಗಿ, ಆರ್. ಎಸ್.ಬೂದಿಹಾಳ, ರಾಜು ಸಜ್ಜನ, ರಾಘವೇಂದ್ರ ಮಾನೆ, ಮಾನಸಿಂಗ್ ಕೊಕಟನೂರ, ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಶ್ರೀಮತಿ ನೀಲಮ್ಮ ಪಾಟೀಲ, ಸಿದ್ದು ಯಾಳವಾರ, ರಾಘು ಬಾಕಲಿ, ಶಶಿ ಮೂಕೀಹಾಳ, ಸಿದ್ದಾರಾಮಪ್ಪ ಮದ್ದರಕಿ, ರವಿ ಯಳಮೇಲಿ, ಶರಣು ಕಲ್ಲೂರ, ಶರಣಪ್ಪ ಚಳ್ಳಗಿ, ರಾಘವೇಂದ್ರ ಬಿಜಾಪೂರ, ಶ್ರೀಮತಿ ಸುವರ್ಣಾ ಬಿರಾದಾರ, ರಾಘವೇಂದ್ರ ಚವ್ಹಾಣ, ಫಯಾಜ ಉತ್ನಾಳ, ಜೈಸಿಂಗ್ ಮೂಲಿಮನಿ, ಮುತ್ತು ಕಶೆಟ್ಟಿ, ಆರ್. ಎಲ್.ಕೊಪ್ಪದ, ಮಂಜು ಶೆಟ್ಟಿ, ಮುದಕಣ್ಣ ಬಡಿಗೇರ, ರವಿ ಕಟ್ಟಿಮನಿ, ಒಳಗೊಂಡು ಸಾವಿರಾರು ಜನರು ಪಾಲ್ಗೊಂಡಿದ್ದರು.

# ಸರಕಾರಕ್ಕೆ ವರುಷ; ಗೃಹಲಕ್ಷ್ಮೀಯರಿಗೆ ಹರುಷ

**ಬಡ ಮಹಿಳೆಯ ಕಣ್ಣಿನ ಶಸ್ತ್ರಚಿಕಿತ್ಸೆಗೆ ನೆರವಾದ ಗೃಹಲಕ್ಷ್ಮಿ ಹಣ | ರಾಮದುರ್ಗದ ಸುರೇಬಾನ-ಮನಿಹಾಳ ಗ್ರಾಮದ ಮಹಿಳೆ**

**ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಧನ್ಯವಾದ ಅರ್ಪಿಸಿದ ಕುಟುಂಬಸ್ಥರು**



**ರಾಮದುರ್ಗ(ಬೆಳಗಾವಿ):** ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯ ಎರಡು ಸಾವಿರ ರೂಪಾಯಿ ಹಣ ಕಳೆದ 10 ತಿಂಗಳಿಂದ ರಾಜ್ಯದ ಬಡ ಮಹಿಳೆಯರ ಪಾಲಿಗೆ ಸಂಜೀವಿನಿಯಾಗುತ್ತಿದೆ.

ಗೃಹಲಕ್ಷ್ಮಿ ಹಣದಿಂದ ಬಡ ಮಹಿಳೆಯೊಬ್ಬರು ಮೊನ್ನೆಯಷ್ಟೆ ತಮ್ಮ ಮನೆಗೆ ಫ್ರೀಜ್ ಖರೀದಿಸಿದ್ದರೆ, ಮತ್ತೋರ್ವ ಮಹಿಳೆ ತನಗಿಷ್ಟದ ಮೊಬೈಲ್ ಖರೀದಿಸಿದ್ದರು. ಬಡ ವಿದ್ಯಾರ್ಥಿಗಳ ಪಾಲಿಗೆ ಈ ಯೋಜನೆ ಹಲವು ರೀತಿಯಲ್ಲಿ ವರದಾನವಾಗಿದೆ.

ಬೆಳಗಾವಿಯ ರಾಮದುರ್ಗದ ಸುರೇಬಾನ - ಮನಿಹಾಳ ಗ್ರಾಮದ ಮಹಿಳೆಯೊಬ್ಬರು ಕಳೆದ 10 ತಿಂಗಳ ಗೃಹಲಕ್ಷ್ಮಿ ಹಣವನ್ನು ಕೂಡಿಟ್ಟು, ಕಣ್ಣಿನ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡಿದ್ದಾರೆ.

ರಾಮದುರ್ಗದ ಮನಿಹಾಳ ಗ್ರಾಮದ ಸಕ್ಕುಬಾಯಿ ಈರಣ್ಣ ಕರದಿನ, ಹಲವು ತಿಂಗಳಿಂದ ಕಣ್ಣಿನ ಸಮಸ್ಯೆ ಎದುರಿಸುತ್ತಿದ್ದರು. ಬಲಗಣ್ಣಿನಲ್ಲಿ ಪೊರೆ ಬಂದಿದ್ದ ಕಾರಣ ಶಸ್ತ್ರಚಿಕಿತ್ಸೆ ಅನಿವಾರ್ಯ ಆಗಿತ್ತು. ಹಣಕಾಸಿನ ಸಮಸ್ಯೆಯಿಂದ ಶಸ್ತ್ರಚಿಕಿತ್ಸೆ ಮಾಡಿಸಿಕೊಳ್ಳದೆ ಸುಮ್ಮನಿದ್ದ ಸಕ್ಕುಬಾಯಿ, ಕಳೆದ 10 ತಿಂಗಳಿಂದ ರಾಜ್ಯ ಸರ್ಕಾರದಿಂದ ಬರುತ್ತಿರುವ ಗೃಹಲಕ್ಷ್ಮಿ ಯೋಜನೆಯ ಮೊತ್ತವನ್ನು ಕೂಡಿಟ್ಟು, ಕಳೆದ ವಾರ ಶಸ್ತ್ರ ಚಿಕಿತ್ಸೆಗೆ ಒಳಗಾಗಿದ್ದಾರೆ. ರಾಮದುರ್ಗದ ಡಾ.ವಿಜಯ್ ಸುಲ್ತಾನ್ ಪುರ ಮಹಿಳೆಗೆ ಶಸ್ತ್ರಚಿಕಿತ್ಸೆ ಮಾಡಿದ್ದಾರೆ.

ಪತಿ ಈರಣ್ಣ ಕರದಿನ, ನೇಕಾರರಾಗಿ ಕೆಲಸ ಮಾಡುತ್ತಿದ್ದು, ಮೂರು ಮಕ್ಕಳ ಕೂಡು ಕುಟುಂಬ ಇವರದ್ದಾಗಿದೆ.

ಗೃಹಲಕ್ಷ್ಮಿ ಯೋಜನೆ ನಮ್ಮ ಕುಟುಂಬವನ್ನು ಕೈಹಿಡಿತು. ಹಿಂದಿನ ಮಂಗಳವಾರ ನನ್ನ ಪತ್ನಿ ಕಣ್ಣಿನ ಶಸ್ತ್ರಚಿಕಿತ್ಸೆಗೆ ಒಳಗಾದರು. ಒಟ್ಟು 26 ಸಾವಿರ ಬಿಲ್ ಆಗಿದ್ದು, ಗೃಹಲಕ್ಷ್ಮಿ ಯೋಜನೆಯಿಂದ 20 ಸಾವಿರ ರೂಪಾಯಿ ಕೂಡಿಟ್ಟಿದ್ದೇವು. ಹೀಗಾಗಿ ಶಸ್ತ್ರಚಿಕಿತ್ಸೆ ಮಾಡಿಸಿಕೊಳ್ಳಲು ಅನುಕೂಲವಾಯಿತು ಎಂದು ಈರಣ್ಣ ಕರದಿನ ಸಂತಸ ವ್ಯಕ್ತಪಡಿಸಿದರು.

**ಸಿಎಂ, ಡಿಸಿಎಂ, ಸಚಿವೆಗೆ ಧನ್ಯವಾದ**

ಗೃಹಲಕ್ಷ್ಮಿ ಯೋಜನೆಯ ರೂವಾರಿಗಳಾದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಮಹಿಳಾ ಮತ್ತು ಮಕ್ಕಳ ತಂಗಿ ಷ್ಟ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರಿಗೆ ಧನ್ಯವಾದ ಹೇಳಬೇಕು. ಅವರು ನೀಡುವ ಎರಡು ಸಾವಿರ ರೂಪಾಯಿಯಿಂದ ನನ್ನ ಕಣ್ಣಿನ ಸಮಸ್ಯೆಗೆ ಪರಿಹಾರ ಸಿಕ್ಕಿತು ಎಂದು ಸಕ್ಕುಬಾಯಿ ಕರದಿನ ಹೇಳಿದರು.

ಒಟ್ಟಾರೆ, ಗೃಹಲಕ್ಷ್ಮೀ ಯೋಜನೆ ರಾಜ್ಯದ ಮಹಿಳೆಯರ ಪಾಲಿಗೆ ಭಾಗ್ಯ ಲಕ್ಷ್ಮೀಯೇ ಆಗಿದೆ.

# ಬರ ನಿರ್ವಹಣೆ: ಮಳೆಗಾಲ ಸಿದ್ಧತೆ ಕುರಿತು ಸಭೆ

**ಕುಡಿಯುವ ನೀರು, ಮೇವು, ಬೀಜ-ಗೊಬ್ಬರ ಕೊರತೆ ಆಗದಂತೆ ಎಚ್ಚರಿಕೆ ವಹಿಸಲು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಸೂಚನೆ**



**ಬೆಳಗಾವಿ :** ಬೇಸಿಗೆ ಹಿನ್ನೆಲೆಯಲ್ಲಿ ಸದ್ಯಕ್ಕೆ ಬರಗಾಲದ ಪರಿಸ್ಥಿತಿ ಇದ್ದರೂ ಈ ಬಾರಿ ಉತ್ತಮ ಮಳೆಯ ಮುನ್ಸೂಚನೆ ಇರುವುದರಿಂದ ರೈತರಿಗೆ ಸಕಾಲಕ್ಕೆ ಬೀಜ-ಗೊಬ್ಬರ ಪೂರೈಸಲು ಸಿದ್ಧತೆ ಮಾಡಿಕೊಳ್ಳಬೇಕು. ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ನಡೆದ ಬರ ನಿರ್ವಹಣೆ ಹಾಗೂ ಮಳೆಗಾಲ ಪೂರ್ವಭಾವಿ ಸಿದ್ಧತೆ ಕುರಿತ ಸಭೆಯಲ್ಲಿ ಅವರು ಮಾತನಾಡಿದರು.

ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವಿನ ಕೊರತೆ ಆಗದಂತೆ ಕ್ರಮ ಕೈಗೊಳ್ಳಬೇಕು. ಈ ಬಾರಿ ಉತ್ತಮ ಮಳೆಯಾಗುವ ನಿರೀಕ್ಷೆ ಇರುವುದರಿಂದ ನೀರು ಸರಾಗವಾಗಿ ಹರಿದು ಹೋಗಲು ಅನುಕೂಲವಾಗುವಂತೆ ಬೆಳಗಾವಿ ನಗರ ಸೇರಿದಂತೆ ಜಿಲ್ಲೆಯ ವಿವಿಧೆಡೆ ಇರುವ ನಾಲಾ-ಹಳ್ಳಗಳ ಸುತ್ತಮುತ್ತಲೂ ಸ್ವಚ್ಛತೆ ಮಾಡಬೇಕು.

ಜಿಲ್ಲಾಡಳಿತ, ಮಹಾನಗರ ಪಾಲಿಕೆ ಹಾಗೂ ಸ್ಮಾರ್ಟ್ ಸಿಟಿ ಅಧಿಕಾರಿಗಳ ಜಂಟಿ ಸಭೆ ನಡೆಸಿ ನಗರದಲ್ಲಿ ಮಳೆಗಾಲ ಪರಿಸ್ಥಿತಿ ಸಮರ್ಪಕ ನಿರ್ವಹಣೆಗೆ ಯೋಜನೆ ರೂಪಿಸಬೇಕು ಎಂದರು.

**ನಕಲಿ ಬೀಜ-ಗೊಬ್ಬರ; ಎಚ್ಚರ ವಹಿಸಲು ಸೂಚನೆ:** ಮಳೆ ಆರಂಭಗೊಂಡ ಬಳಿಕ ರೈತರಿಗೆ ನಕಲಿ ಬೀಜ ಅಥವಾ ಗೊಬ್ಬರ ಪೂರೈಕೆಯ ಬಗ್ಗೆ ದೂರುಗಳಿದ್ದರೆ ಅಂತಹ ಪ್ರಕರಣಗಳ ಬಗ್ಗೆ ಎಚ್ಚರಿಕೆ ವಹಿಸಬೇಕು ಎಂದು ಸಚಿವ ಜಾರಕಿಹೊಳಿ ತಿಳಿಸಿದರು

**ಮನೆಹಾನಿ ಪರಿಹಾರ; ಸಮರ್ಪಕ ಸಮೀಕ್ಷೆಗೆ ಸಲಹೆ:**

ಮನೆಹಾನಿ ಪರಿಹಾರ ನೀಡುವಾಗ 2019ರಲ್ಲಿ ಕೆಲವು ನ್ಯೂನ್ಯತೆಗಳು ಕಂಡುಬಂದಿರುತ್ತವೆ. ಜಾನುವಾರುಗಳ ಕೊಟ್ಟಿಗೆಗಳು ಮನೆಯ ಪ್ರವೇಶ ದ್ವಾರದ ಬಳಿ ಇರುತ್ತವೆ. ಇದಲ್ಲದೇ ಮಳೆ ಜೋರಾದಾಗ ಜನರು ಮುಂಜಾಗ್ರತಾ ಕ್ರಮವಾಗಿ ಮನೆಗಳನ್ನು ತೆರವುಗೊಳಿಸಿ ಬೇರೆ ಕಡೆ ವಾಸವಿರುತ್ತಾರೆ. ಅಂತಹ ಮನೆಗಳು ಬಿದ್ದ ಸಂದರ್ಭದಲ್ಲಿ ಪರಿಹಾರ ಸಿಕ್ಕಿರುವುದಿಲ್ಲ.

ಈ ಬಾರಿ ಇಂತಹ ಅಂಶಗಳನ್ನು ಗಮನಿಸಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಸೂಚನೆ ನೀಡಿದರು.

ಬೆಳಗಾವಿ ಸೇರಿದಂತೆ ನಗರ ಪ್ರದೇಶಗಳಲ್ಲಿ ಬೀದಿನಾಯಿಗಳ ಹಾವಳಿ ಹಾಗೂ ನಾಯಿಕಡಿತದ ಬಗ್ಗೆ ವ್ಯಾಪಕ ಚರ್ಚೆಯಾಗುತ್ತಿದ್ದು, ಸಾರ್ವಜನಿಕರಿಗೆ ತೊಂದರೆಯಾಗದಂತೆ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಎಂದು ಅಧಿಅಕರಿಗಳಿಗೆ ನಿರ್ದೇಶನ ನೀಡಿದರು.

**ಬರಗಾಲದಿಂದ ಬೆಳೆಹಾನಿ 316 ಕೋಟಿ ಪರಿಹಾರ ಬಿಡುಗಡೆ:**

ಜಿಲ್ಲೆಯಲ್ಲಿ 2023-24ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬರಗಾಲದಿಂದ ಬೆಳೆಹಾನಿಗಿದ್ದರಿಂದ 3,74,066 ರೈತರಿಗೆ ಒಟ್ಟಾರೆ 316 ಕೋಟಿ ರೂಪಾಯಿ ಬೆಳೆಹಾನಿ ಪರಿಹಾರ ನೀಡಲಾಗಿದೆ.

ಆಧಾರ್ ಸೀಡಿಂಗ್, ಖಾತೆ ಸ್ಥಗಿತ ಸೇರಿದಂತೆ 23 ರೈತರಿಗೆ ಮಾತ್ರ ಪರಿಹಾರ ಜಮೆ ಮಾಡುವುದು ಸಾಧ್ಯವಾಗಿರುವುದಿಲ್ಲ. ಈ ಬಗ್ಗೆ ರೈತರಿಗೆ ತಿಳಿವಳಿಕೆ ನೀಡಿ ತಾಂತ್ರಿಕ ಸಮಸ್ಯೆ ಸರಿಪಡಿಸಲಾಗುತ್ತಿದೆ. ಉಳಿದ ರೈತರಿಗೂ ಪರಿಹಾರ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಕೆಲವು ಕಡೆಗಳಲ್ಲಿ ಪಾಳು ಜಮೀನಿನಲ್ಲಿ ಬಿತ್ತನೆ ಆಗದಿರುವುದರಿಂದ ಅಂತಹ ಜಮೀನುಗಳಿಗೆ ಸಂಬಂಧಿಸಿದ ಪರಿಹಾರ ನೀಡಲಾಗಿರುವುದಿಲ್ಲ.

105 ಗ್ರಾಮಗಳಲ್ಲಿ ಪ್ರತಿದಿನ 630 ಟ್ಯಾಂಕರ್ ಟ್ರಿಪ್‌ಗಳ ಮೂಲಕ ಶುದ್ಧ ಕುಡಿಯುವ ನೀರು ಪೂರೈಸಲಾಗುತ್ತಿದೆ. ಉಳಿದ ಕಡೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಿಲ್ಲ. ವಿವಿಧೆಡೆ ಸ್ಥಾಪಿಸಲಾಗಿತುವ ಮೇವು ಬ್ಯಾಂಕುಗಳ ಮೂಲಕ 580 ಟನ್ ಮೇವು ಕೂಡ ಪೂರೈಸಲಾಗಿರುತ್ತದೆ.

ಮಹಾರಾಷ್ಟ್ರದ ಜಲಾಶಯಗಳಲ್ಲಿ ಸಾಕಷ್ಟು ಪ್ರಮಾಣದಲ್ಲಿ ನೀರು ಸಂಗ್ರಹವಿರುತ್ತದೆ. ಮಳೆಗಾಲ ಆರಂಭಕ್ಕೂ ಮುನ್ನ ನೀರು ಬಿಡುಗಡೆ ಮಾಡಿದರೆ ಅನುಕೂಲವಾಗಲಿದೆ.

ಬರಗಾಲ ನಿರ್ವಹಣೆಗೆ 35 ಕೋಟಿ ರೂಪಾಯಿ ಲಭ್ಯವಿರುತ್ತದೆ. ಹಣಕಾಸಿನ ತೊಂದರೆಯಿಲ್ಲ. ಮಳೆಗಾಲದ ಹಿನ್ನೆಲೆಯಲ್ಲಿ ಕೆರೆಗಳ ಹೂಳೆತ್ತಲು ಟೆಂಡರ್ ಕರೆಯಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ವಿವರಿಸಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶಿವನಗೌಡ ಪಾಟೀಲ ಅವರು, ಬೀಜ-ಗೊಬ್ಬರಗಳ ದಾಸ್ತಾನು ಕುರಿತು ಸಭೆಯಲ್ಲಿ ವಿವರಿಸಿದರು.

ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಬೆಳಗಾವಿ ಮಹಾನಗರ ಪಾಲಿಕೆಯ ಆಯುಕ್ತರಾದ ಪಿ.ಎನ್.ಲೋಕೇಶ್, ಸೇರಿದಂತೆ ಜಿಲ್ಲಾ ಪಂಚಾಯತಿ, ಪಶುಪಾಲನೆ ಇಲಾಖೆ, ನಗರ ನೀರು ಸರಬರಾಜು ಮಂಡಳಿ, ಗ್ರಾಮೀಣ ಕುಡಿಯುವ ನೀರು, ಕೆಯುಐಡಿಎಫ್ ಸಿ ಮತ್ತಿತರ ಇಲಾಖೆಗಳ ಅಧಿಕಾರಿಗಳು

# ಭಯೋತ್ಪಾದನಾ ವಿರೋಧಿ ದಿನ: ಪ್ರತಿಜ್ಞಾ ವಿಧಿ ಸ್ವೀಕಾರ



**ಕೊಪ್ಪಳ :** ಜಿಲ್ಲಾಡಳಿತದ ವತಿಯಿಂದ ಮೇ 21 ರ ಮಂಗಳವಾರಂದು ಭಯೋತ್ಪಾದನಾ ವಿರೋಧಿ ದಿನಾಚರಣೆಯನ್ನು ಆಚರಿಸಲಾಯಿತು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಂಶುಪಾಲರಾದ ಕೃಷ್ಣಮೂರ್ತಿ ದೇಸಾಯಿ ಅವರು ಪ್ರತಿಜ್ಞಾ ವಿಧಿ ಬೋಧಿಸಿದರು.

ಈ ಸಂದರ್ಭ ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ, ಜಂಟಿ ಕೃಷಿ ನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್, ಶಿರಸ್ತೇದಾರ್ ಶಿವು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಬೆಳಗಾವಿ: ಮರಿಕಟ್ಟಿಯ ಡಾ. ಸಿದ್ದೇಶ್ವರ ದೇವರಿಗೆ ಸತ್ಕಾರ



**ಬೆಳಗಾವಿ :** ಡಾ. ಸಿದ್ದೇಶ್ವರ ದೇವರು ಮರಿಕಟ್ಟಿ ತಾ: ಬೈಲಹೊಂಗಲ ಇವರಿಗೆ ಇತ್ತೀಚಿಗೆ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಬೆಂಗಳೂರು ಇವರು "ಅದ್ವೈತ್ವ ವೇದಾಂತ ಮತಾನುಸಾರೇನ ಶರೀರತ್ರಯ ವಿವೇಚನಂ" ಎಂಬ ಸಂಸ್ಕೃತ ಮಹಾಪ್ರಬಂಧಕ್ಕೆ ಡಾಕ್ಟರೇಟ್ (ವಿದ್ಯಾವಾರಿಂಧಿ) ಪದವಿ ಪ್ರದಾನ ಮಾಡಿದ ಪ್ರಯುಕ್ತ ಅವರನ್ನು ಬೆಳಗಾವಿ ತಾಲೂಕಿನ ಬಾಳೇಕುಂದ್ರಿ ಗ್ರಾಮದಲ್ಲಿ ಹಮ್ಮಿಕೊಂಡ ಬಸವ ಜಯಂತಿ ಕಾರ್ಯಕ್ರಮದಲ್ಲಿ ಬೆಳಗಾವಿ ಚಿನ್ಮಯ ಚಿಂತನ ಚಾವಡಿ ಸಂಸ್ಥೆಯ ವತಿಯಿಂದ ಸತ್ಕಾರಿಸಲಾಯಿತು.

ಡಾ. ಸಿದ್ದೇಶ್ವರ ದೇವರು ಮರಿಕಟ್ಟಿ ಎಂದು ಚಿರಪರಿಚಿತರಾದ ಇವರು ಬೆಳಗಾವಿ ಜಿಲ್ಲಾ ಬೈಲಹೊಂಗಲ ತಾಲೂಕ ಮರಿಕಟ್ಟಿ ಗ್ರಾಮದ ತಂದೆ ಬಸವಂತಪ್ಪ ತಾಯಿ ಪಾರ್ವತಮ್ಮ ಕರೆಪ್ಪಗೋಳ್ ಎಂಬ ದಂಪತಿಗಳ ಜೇಷ್ಠ ಸುಪುತ್ರರಾಗಿ 18-07-1970 ರಲ್ಲಿ ಜನಿಸಿದರು.

ಸುಮಾರು 25 ವರ್ಷಗಳ ಕಾಲ ತಂದೆಯ ಜೊತೆಯಲ್ಲಿ ವ್ಯವಸಾಯ ಮಾಡುತ್ತ ಬೆಳೆದು ಕಾರಣಾಂತರಗಳಿಂದ ಸತ್ಸಂಗದ ಬಲದಿಂದ ಸಂಸ್ಕೃತ ಅಧ್ಯಯನ ಮಾಡಲು ಬೆಂಗಳೂರಿಗೆ ಹೋಗಿ 12 ವರ್ಷಗಳ ಕಾಲ ಓದಿ ಅದ್ವೈತ ವೇದಾಂತ ವಿದ್ವಾನ ಸಂಸ್ಕೃತ ಎಂ.ಎ. ಪದವಿ ಪಡೆದರು.

ಈ ಸತ್ಕಾರವನ್ನು ಸಂಸ್ಥೆಯ ಪರವಾಗಿ ಅಶೋಕ ಉಳ್ಳೇಗಡಿ, ಸ.ರಾ.ಸುಳಕೂಡೆ, ಬಸವ ಶಾಸ್ತ್ರೀ ಹಣ್ಣಿಕೇರಿ, ಸಂತೋಷ ಹಿರೇಮಠ, ಬಸವ ದಳದ ಶರಣ ಅಸ್ಕಿ ಮುಂತಾದವರು ನಡೆಸಿಕೊಟ್ಟರು.


ಡಾ. ಸಿದ್ದೇಶ್ವರ ದೇವರು ಮರಿಕಟ್ಟಿ ಇವರು ಈಗಾಗಲೇ ಒಂದು ಗೌರವ ಡಾಕ್ಟರೇಟ್ (ವಿದ್ಯಾವಾರದಿ) ಪದವಿ ಪಡೆದವರಾಗಿದ್ದಾರೆ. ಪ್ರಸ್ತುತ ಕರ್ನಾಟಕ ಸಂಸ್ಕೃತಿ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ ಪಡೆದಿದ್ದಾರೆ. ಮಹಾಪ್ರಬಂದಕ್ಕೆ ಪ್ರೊ. ಕೃಷ್ಣ ವೆ. ಜೋಶಿಯವರು ಮಾರ್ಗದರ್ಶನ ನೀಡಿದ್ದಾರೆ.

# ಕಠಿಣ ಕ್ರಮಕ್ಕೆ ಆಗ್ರಹಿಸಿ ಪ್ರತಿಭಟನೆ




**ಹುಬ್ಬಳ್ಳಿ :** ಬೆಂಗಳೂರಿನಲ್ಲಿ ಕಾರ್ಯನಿರತ ಛಾಯಾಗ್ರಾಹಕರ ಮೇಲೆ ಅವಾಚ್ಯ ಶಬ್ದಗಳಿಂದ ನಿಂದಿಸಿದಲ್ಲದೇ ಅವರ ಮೇಲೆ ಹಲ್ಲೆ ನಡೆಸಿದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಹುಬ್ಬಳ್ಳಿ ಫೊ?ಟೋ ಮತ್ತು ವಿಡಿಯೋಗ್ರಾಫರ್ಸ್ ಸಂಘದ ಪದಾಧಿಕಾರಿಗಳು ಗುರುವಾರ ನಗರದ ಮಿನಿವಿಧಾನ ಸೌಧ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿದರು. ಕ್ಯಾಮರಾ ಸಲಕರಣೆಗಳನ್ನು ನಾಶ ಮಾಡಿದ್ದು ಖಂಡನೀಯ, ಈ ಪ್ರಕರಣವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿ ವೃತ್ತಿನಿರತ ಛಾಯಾಗ್ರಹಕರಿಗೆ ರಕ್ಷಣೆ ನೀಡಬೇಕು. ಹಲ್ಲೆ ಮಾಡಿರುವ ತಪ್ಪಿತಸ್ಥರಿಗೆ ಕಠಿಣ ಕಾನೂನು ಕ್ರಮ ಜರುಗಿಸಬೇಕು. ಹಲ್ಲೆಗೊಳಗಾದ ಛಾಯಾಗ್ರಾಹಕರಿಗೆ ರಾಜ್ಯ ಸರ್ಕಾರ ಸೂಕ್ತ ಪರಿಹಾರವನ್ನು ನೀಡಬೇಕು. ಇಂಥಹ ಪ್ರಕರಣಗಳು ರಾಜ್ಯದಲ್ಲಿ ಮರುಕಳಿಸದಂತೆ ಸರ್ಕಾರ ಭದ್ರತೆಯನ್ನು ನೀಡಬೇಕು ಎಂದು ನಗರದ ತಹಶಿಲ್ದಾರ ಮೂಲಕ ಪ್ರತಿಭಟನಾಕಾರರು ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಹುಬ್ಬಳ್ಳಿ ಎಚ್.ಪಿ.ಮತ್ತು ವಿ.ಪಿ ಅಧ್ಯಕ್ಷರಾದ ಕಿರಣ್ ಬಾಕಳೆ, ಕಾರ್ಯದರ್ಶಿ ರವೀಂದ್ರ ಕಾಟೀಗರ ಮೊದಲಾದವರು ಉಪಸ್ಥಿತರಿದ್ದರು.

# ಪ್ರವಾಸಿಗರನ್ನು ಕೈ ಬೀಸಿ ಕರೆಯುತ್ತಿರುವ ಹಿರೇದಿಡುಗು ಜಲಪಾತ



**ಗುಳೇದಗುಡ್ಡ :** ಪಟ್ಟಣ ಸೇರಿದಂತೆ ತಾಲೂಕಿನ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕಳೆದ ನಾಲ್ಕೈದು ದಿನಗಳಿಂದ ಉತ್ತಮ ಮಳೆಯಾದ ಪರಿಣಾಮ ಗುಳೇದಗುಡ್ಡ-ಕೋಟೆಕಲ್ಲ ಹಿರೇದಿಡುಗು ಜಲಪಾತಕ್ಕೆ ಈಗ ಮತ್ತೇ ಜೀವಕಳೆ ಬಂದಿದ್ದು, ಪ್ರವಾಸಿಗರನ್ನು ಕೈ ಬಿಸಿ ಕರೆಯುತ್ತಿದೆ.

ಕಳೆದ ಎರಡ್ಮೂರು ದಿನಗಳಿಂದ ಈ ಹಿರೇದಿಡುಗು ಜಲಪಾತ ಮೈದುಂಬಿ ಹರಿಯುತ್ತಿದೆ. ಹಲವಾರು ಜನರು ವಿಶೇಷವಾಗಿ ಯುವಕರು ಈ ಕಿರು ಜಲಪಾತಕ್ಕೆ ಭೇಟಿ ನೀಡಿ, ಧುಮ್ಮಿಕ್ಕಿ ಹರಿಯುವ ನೀರಿಗೆ ಮೈಯೊಡ್ಡಿ ಸಂಭ್ರಮಿಸುತ್ತಿದ್ದಾರೆ. ಜಲಪಾತದ ಕೆಳಗೆ ಸ್ನಾನ ಮಾಡಿ ಖುಷಿ ಅನುಭವಿಸುತ್ತಿದ್ದಾರೆ. ಮಳೆಗಾಲಯದಲ್ಲಿ ತನ್ನ ಸೌಂದರ್ಯ ಪ್ರದರ್ಶಿಸುವ ಈ ಜಲಪಾತ ಈ ಭಾಗದ ಪ್ರವಾಸ ಪ್ರೀಯರಿಗೆ ಬಲು ಅಚ್ಚುಮೆಚ್ಚು ತಾಣವೆನಿಸಿದೆ. ಈ ಬಾರಿ ಮೇ ತಿಂಗಳ ಬೇಸಿಗೆಯಲ್ಲಿಯೇ ಉತ್ತಮವಾಗಿ ಮಳೆ ಬಿದ್ದು ಬಿಸಿಲು ಮೂಡಿದ್ದರಿಂದ ಜಲಪಾತ ಮತ್ತಷ್ಟು ಜೋರು ಹರಿಯುತ್ತದೆ.

ಗುಳೇದಗುಡ್ಡ ಪಟ್ಟಣದಿಂದ ಸುಮಾರು 3 ಕಿ.ಮೀ. ದೂರವಿರುವ ಈ ಜಲಪಾತ ಕೋಟಿಕಲ್ಲ ಗ್ರಾಮಕ್ಕೆ ಹತ್ತಿಕೊಂಡಿರುವ ಇರುವ ವಿಶಾಲವಾದ ಗುಡ್ಡದ ಮೇಲೇರಿದರೆ ಸಿಗುತ್ತದೆ. ವಿಶಾಲವಾದ ಗುಡ್ಡದ ಕೊಳ್ಳದಲ್ಲಿ ಸುಮಾರು 25 ಅಡಿ ಎತ್ತರಿದಂದ ಹಾಲಿನಂತೆ ಧುಮುಕುತ್ತಿದೆ ಈ ಜಲಪಾತ. ಇಲ್ಲಿರುವ ಗಿಡಮರಗಳನ್ನು ನೋಡಿದರೆ ಮಲೆನಾಡನ್ನು ನೆನಪಿಸುತ್ತದೆ. ಇದು ಬಯಲುನಾಡಿನ ಜೋಗ ಎಂದೇ ಪ್ರಸಿದ್ಧಿಯಾಗಿದೆ.

# ಅಂಜಲಿ ಕುಟುಂಬಕ್ಕೆ ಐವತ್ತೊಂದು ಸಾ. ಸಹಾಯಧನ ಮಾಡಿ ಮಾನವಿಯತೆ ಮೆರೆದ ಲಚ್ಚಪ್ಪ ಜಮಾದಾರ

**ಕಲಬುರಗಿ :** ಹುಬ್ಬಳ್ಳಿಯ ಮೃತ ಅಂಜಲಿ ಅಂಬಿಗೇರ ಅವರ ಮನೆಗೆ ಭೇಟಿಕೊಟ್ಟು ಕುಟುಂಬದ ಸದಸ್ಯರಿಗೆ ಸಾಂತ್ವಾನ ಹೇಳಿ ವಯಕ್ತಿಕವಾಗಿ ರೂ. 51 ಸಾವೀರ ರೂಪಾಯಿ ಸಹಾಯಧನವನ್ನು ಕೂಲಿ ಕಬ್ಬಲಿಗ ಎಸ್. ಟಿ.ಹೋರಾಟ ಸಮಿತಿ ರಾಜ್ಯಾದ್ಯಕ್ಷರಾದ ಲಚ್ಚಪ್ಪ ಎಸ್. ಜಮಾದಾರ ಅವರು ಮಾಡುವ ಮೂಲಕ ಮಾನವಿಯತೆ ಮೆರೆದರು.



ಇತ್ತೀಚಿಗೆ ಹುಬ್ಬಳ್ಳಿಯಲ್ಲಿ ಕ್ರೂರವಾಗಿ ಕೊಲೆಯಾದ ಅಂಜಲಿ ಅಂಬಿಗರ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಲು ಕಲಬುರಗಿಯಿಂದ ಹುಬ್ಬಳ್ಳಿಗೆ ತೆರೆಳಿ ಕುಟುಂಬಕ್ಕೆ ಧೈರ್ಯ ತುಂಬಿ ಹತ್ಯೆಯನ್ನು ತೀವ್ರವಾಗಿ ಖಂಡಿಸಿ, ಅಂಜಲಿ ಆತ್ಮಕ್ಕೆ ಶಾಂತಿ ಸಿಗಬೇಕಾದರೆ ಕೂಡಲೇ ಕೊಲೆ ಆರೋಪಿಗೆ ಗಲ್ಲು ಶಿಕ್ಷೆ ವಿಧಿಸಬೇಕೆಂದು ಲಚ್ಚಪ್ಪ ಜಮಾದಾರ ಅವರು ಕರ್ನಾಟಕ ಸರ್ಕಾರಕ್ಕೆ ಮನವಿ ಮಾಡಿದರು.

ದಿನೇ, ದಿನೇ ಕೋಲಿ ಸಮಾಜದ ಮೇಲೆ ಅಂಜಲಿ ಅಂಬಿಗೇರ ಹಾಗೆ, ರಾಜ್ಯದಲ್ಲಿ ಅನೇಕ ಕೃತ್ಯಗಳು ಮತ್ತು ಕೊಲೆಗಳು ನಡಿಯುತ್ತಿವೆ. ಈ ತರ ಹೀನ ಕೃತ್ಯಗಳನ್ನು ನಾವು ತೀವ್ರವಾಗಿ ಖಂಡಿಸುವುದರ ಜೊತೆಗೆ ಕೊಲೆ ಆರೋಪಗಳನ್ನು ಕಾನೂನು ಪ್ರಕಾರ ಕಠಿಣವಾದ ಶಿಕ್ಷೆ ನೀಡುವವರೆಗೂ ಬೀದಿಗಿಳಿದು ಉಗ್ರವಾದ ಹೋರಾಟ ಮಾಡುತ್ತೇವೆ ಎಂದು ಜಮಾದಾರ ಅವರು ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಪಿಂಟೂ ಜಮಾದಾರ, ರಾಮಲಿಂಗ ನಾಟಿಕಾರ, ಮಲ್ಲಿಕಾರ್ಜುನ ಗುಡಬಾ, ನಾಗೇಂದ್ರಪ್ಪ ಲಿಂಗಂಪಲ್ಲಿ, ಸಿದ್ದಪ್ಪ ಸಿನ್ನೂರ, ಅಂಬಾರಾಯ ಜವಳಗಾ, ದುಂಡಪ್ಪ ಜಮಾದಾರ, ಸತೀಶ್ ಜಮಾದಾರ, ದೇವೇಂದ್ರ ಜಮಾದಾರ, ಪರಮೇಶ್ವರ ಅಪಚಂದ, ಸುರೇಶ್ ನಾಟಿಕಾರ ಹಾಗೂ ಅಂಜಲಿ ಕುಟುಂಬದ ಸದಸ್ಯರಿದ್ದರು.

# ನಿಗದಿತ ಅವಧಿಯೊಳಗೆ ಬೀಜ, ರಸಗೊಬ್ಬರ ಪೂರೈಸಿ

**ಚನ್ನಮ್ಮನ ಕಿತ್ತೂರು :** ಮೇ.22, ರೈತರು ಮುಂಗಾರಿನ ಬಿತ್ತನೆಗಾಗಿ ಜಮೀನುಗಳನ್ನು ಸಜ್ಜುಗೊಳಿಸಿದ್ದಾರೆ. ಕಳೆದೆರಡು ವರ್ಷಗಳಿಂದ ಕೈಗೆ ಬಾರದ ತುತ್ತು ಬಾಯಿಗೆ ಬರದಂತಾಗಿ ಅನ್ನದಾತ ಕೈ ಸುಟ್ಟು-ಕೊಂಡು ಪ್ರಸಕ್ತ ಹಂಗಾಮಿಗಾಗಿ ಭೂಮಿಗಳನ್ನು ಹಸನು ಮಾಡಿದ್ದಾರೆ ಎಂದು ಕೃಷಿ ಅಧಿಕಾರಿ ಬಸವರಾಜ ದಳವಾಯಿ ಹೇಳಿದರು.

ಕಿತ್ತೂರ ಹೋಬಳಿ ರೈತ ಸಂಪರ್ಕ ಕೇಂದ್ರದಲ್ಲಿ ನಡೆದ ಕೃಷಿ ಪರಿಕರಗಳ ಮಾರಾಟಗಾರರ ಸಭೆಯ ಅಧ್ಯಕ್ಷತೆ ವಹಿಸಿ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು. 2024-25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕೃಷಿ ಪರಿಕರಗಳಾದ ಮಾರಾಟಗಾರರು ರೈತರಿಗೆ ತೊಂದರೆಯಾಗದಂತೆ ಗುಣಮಟ್ಟದ ಬೀಜ, ರಸಗೊಬ್ಬರ, ಕೀಟನಾಶಕ, ಕಳೆನಾಶಕಗಳನ್ನು ಸಕಾಲದಲ್ಲಿ ವಿತರಿಸಬೇಕು. ಹಾಗೂ ನಿಗದಿತ ದರದಲ್ಲಿ ರೈರತರಿಗೆ ವಿತರಿಸಲು ಪರಿಕರ ಮಾರಾಟ ಅಂಗಡಿಕಾರರಿಗೆ ತಿಳಿಸಿದರು. ಹೆಚ್ಚಿನ ದರದಲ್ಲಿ ಮಾರಾಟ ಮಾಡುವುದು ಕಂಡು ಬಂದರೆ ಸೂಕ್ತ ಕಾನೂನು ಕ್ರಮ ಜರುಗಿಸಲಾವುದೆಂದರು.



ತಹಶೀಲ್ದಾರ ರವೀಂದ್ರ ಹಾದಿಮನಿ ಮಾತನಾಡಿ ಮುಂಗಾರು ಆಶಾದಾಯಕವಾಗಿರುವುದರಿಂದ ರೈತರ ಮುಖದಲ್ಲಿ ಮಂದಹಾಸ ಮೂಡಿದ್ದು ಭೂಮಿ ಹದ ಮಾಡಿಕೊಳ್ಳುತ್ತಿದ್ದಾರೆ. ರೈತರಿಗೆ ಯಾವುದೇ ರೀತಿ ತೊಂದರೆಯಾಗದಂತೆ ಬೀಜ, ರಸಗೊಬ್ಬರ, ಕೀಟನಾಶಕ ಸಕಾಲದಲ್ಲಿ ವಿತರಿಸಬೇಕೆಂದರು.

ಕೃಷಿ ಸಹಾಯಕ ಅಧಿಕಾರಿ ಮಂಜುನಾಥ ಕೆಂಚರಾವುತ ಮಾತನಾಡಿ ಅಧಿಕೃತ ಪರವಾನಗಿ ಪಡೆದು ಪರಿಕರ ಮಾರಾಟಗಾರರು ಮಾರಾಟ ಮಾಡಬೇಕು. ರೈತರಿಗೆ ರಶೀದಿಯನ್ನು ನೀಡಬೇಕು. ದಾಸ್ತಾನು ಖಾಲಿಯಾಗದಂತೆ ನೋಡಿಕೊಳ್ಳುವುದು ಪ್ರತಿವಾರ ರಸಗೊಬ್ಬರ ದಾಸ್ತಾನು ವಿವರಗಳನ್ನು ಕಛೇರಿಗೆ ತಿಳಿಸಬೇಕೆಂದು ನಿರ್ದೇಶನ ನೀಡಿದರು.

ಕೃಷಿ ಮಾರಾಟಗಾರರಾದ ಚಂದ್ರಗೌಡ ಪಾಟೀಲ ಮಾತನಾಡಿ ಎಲ್ಲಾ ಕೃಷಿ ಪರಿಕರಗಳ ಮಾರಾಟಗಾರರು ಇಲಾಖೆ ಹಾಗೂ ರೈತರೊಂದಿಗೆ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತಿದ್ದು ರೈತರಿಗೆ ತೊಂದರೆಯಾಗದಂತೆ ನೋಡಿಕೊಳ್ಳಲಾಗುವುದೆಂದು ತಿಳಿಸಿದರು.

ಇದಕ್ಕೂ ಪೂರ್ವದಲ್ಲಿ ಸಾಂಕೇತಿಕವಾಗಿ ರೈತರಿಗೆ ಗೋವಿನ ಜೋಳ ವಿತರಿಸಿದರು.

ಈ ವೇಳೆ ಸಹಾಯಕ ತೋಟಗಾರಿಕೆ ಇಲಾಖೆ ಅಧಿಕಾರಿ ಅಶ್ವಿನಿ ಎತ್ತಲಗುಡ್ಡ, ಕೃಷಿ ಇಲಾಖೆಯ ವಿಠ್ಠಲ ಹೊಂಗಲ, ವಿಶಾಲ ಅರಳಿಮರದ, ಜಗದೀಶ ನಾಗಯ್ಯಾ, ಹಾಗೂ ಕೃಷಿ ಪರಿಕರ ಮಾರಾಟಗಾರರು, ಇಲಾಖೆ ಸಿಬ್ಬಂದಿ, ರೈತರಿದ್ದರು.

# ಸಾಧನೆಯ ಹಾದಿ ಸುಗಮವಲ್ಲ

**ಬ್ಯಾಡಗಿ :** ಸಾಧನೆಯ ಹಾದಿ ಸುಗಮವಲ್ಲ, ಛಲವಿದ್ದವರು ಮಾತ್ರ ಆ ಹಾದಿಯಲ್ಲಿ ಸಾಗಲು ಸಾಧ್ಯ ಎಂದು ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶಾಸಕ ಬಸವರಾಜ ಶಿವಣ್ಣನವರ ಹೇಳಿದರು.

ಪ್ರಸಕ್ತ ಸಾಲಿನ ಎಸ್ಸೆಸ್ಸಲ್ಸಿ ಪರೀಕ್ಷೆಯಲ್ಲಿ ಅಧಿಕ ಅಂಕಗಳನ್ನು ಪಡೆದು ಹಾವೇರಿ ಜಿಲ್ಲೆಗೆ ಪ್ರಥಮ ಸ್ಥಾನವನ್ನು ಗಳಿಸಿದ ಬ್ಯಾಡಗಿ ಪಟ್ಟಣದ ಬಿಇಎಸ್ ಪ್ರೌಢಶಾಲೆಯ ವಿದ್ಯಾರ್ಥಿ ಹೇಮಂತ ಛತ್ರದ, ತಾಲೂಕಿನ ಮೋಟೆಬೆನ್ನೂರ ಗ್ರಾಮದ ನವೋದಯ ವಿದ್ಯಾಸಂಸ್ಥೆಯ ವಿದ್ಯಾರ್ಥಿ ತರುಣ ಹಿರೇಮಠ ಹಾಗೂ ಕದರಮಂಡಲಗಿ ಗ್ರಾಮದ ಸ್ಪಂದನಾ ಪ್ರೌಢಶಾಲೆಯ ವಿದ್ಯಾರ್ಥಿ ನಿಖಿಲ್ ಬೆಳವಿಗಿ ಅವರುಗಳ ಮನೆಗಳಿಗೆ ತೆರಳಿ ಅವರಿಗೆ ಸನ್ಮಾನಿಸಿ ಮಾತನಾಡಿದ ಅವರು, ನಮ್ಮ ಕ್ರಿಯೆಗಳಿಗೆ ಪೂರಕವಾಗಿ ಪ್ರತಿಕ್ರಿಯೆ ಇರುತ್ತದೆ. ಅದೇ ರೀತಿ ನಾವು ಅಪೇಕ್ಷೆ ಪಟ್ಟಂತ ಫಲಿತಾಂಶವನ್ನು ಪಡೆಯಲು ಅತೀ ವೇಗವಾಗಿ ಸಾಧನೆಯ ಹಾದಿಯಲ್ಲಿ ಸಾಗಬೇಕಾಗಿದೆ. ಪ್ರತಿಭೆ ಎಲ್ಲರಲ್ಲೂ ಇದೆ. ಆದರೆ ಆಗಿನ ಆಧುನಿಕ ಜಗತ್ತಿನಲ್ಲಿ ಸ್ಪರ್ಧೆ ಅನಿವಾರ್ಯ. ಇವೆರಡರ ನಡುವೆ ಸಾಮಾಜಿಕ ಜವಾಬ್ದಾರಿಯ ಜೊತೆಗೆ ಹೊಂದಾಣಿಕೆ ಮಾಡಿಕೊಂಡು ಹೋದರೆ ಮಾತ್ರ ಯಶಸ್ಸು ನಿಶ್ಚಿತ ಎಂದು ತಿಳಿಸಿದರಲ್ಲದೇ ತಾಲೂಕಿಗೆ ಕೀರ್ತಿ ತಂದ ಎಲ್ಲಾ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಅವರು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ಜಿ.ಕೋಟಿ, ಕ್ಷೇತ್ರ ಸಮನ್ವಯಾಧಿಕಾರಿ ಎಂ. ಎಫ್. ಹುಲ್ಯಾಳ, ತಾಲೂಕಾ ನೌಕರರ ಸಂಘದ ಅಧ್ಯಕ್ಷ ಮಹಾದೇವ ಕರಿಯಣ್ಣನವರ, ರೈತ ಸಂಘದ ಮುಖಂಡ ಗಂಗಣ್ಣ ಎಲಿ, ಡಾ.ಪಿ.ಟಿ.ಲಕ್ಕಣ್ಣನವರ, ಬೀರಪ್ಪ ಬಣಕಾರ, ರಮೇಶ ಸುತ್ತಕೋಟಿ, ಮುನಾಫಅಹ್ಮದ್ ಯರೇಸಿಮಿ, ದುರ್ಗೇಶ ಗೋಣೆಮ್ಮನವರ, ಗಿರೀಶ ಇಂಡಿಮಠ, ರಾಜೀವ್ ಶಿಗ್ಲಿ, ಬಸವರಾಜ ಬಳ್ಳಾರಿ, ಶಾಸಕರ ಆಪ್ತ ಸಹಾಯಕ ನದಾಫ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

**ವಿಜಯಪುರ :** ಸಿಂದಗಿ ರಸ್ತೆಯಲ್ಲಿರುವ ಅಲ್ಲಾಪುರ ತಾಂಡಾದ ಶ್ರೀಧರ ಪೋಮ್‌ಸಿಂಗ ರಾಠೋಡ(29) ಎಂಬ ಯುವಕ ಕಾಣೆಯಾಗಿದ್ದಾನೆ ಎಂದು ಗೋಲ್‌ಗುಮ್ಮಜ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.



ಈತ ಮಹಾರಾಷ್ಟ್ರದ ವಿಪ್ರೋ ಎನ್ನುವ ಕಂಪನಿಯಲ್ಲಿ ನೌಕರನಾಗಿದ್ದು, ಮೇ.4ರಂದು ನಸುಕಿನ ಜಾವ 5 ಗಂ-ಟೆ ಸುಮಾರಿಗೆ ಪುಣೆಗೆ ಹೊಗಿ ತನಗೆ ಬರುವ ಬಾಕಿ ಸಂಬಳವನ್ನು ತೆಗೆದುಕೊಂಡು ಬರುತ್ತೇನೆಂದು ಹೋದವನು ಮನೆಗೆ ಬಾರದೇ ಹಾಗೂ ಪೋನ್ ಸಂಪರ್ಕಕ್ಕೆ ಸಿಗದೆ ಕಾಣೆಯಾಗಿದ್ದಾನೆಂದು ಕಾಣೆ-ಯಾದ ಯುವಕನ ಅಣ್ಣ ಸತೀಶ್ ಪೋಮಸಿಂಗ್ ರಾಠೋಡ ದೂರು ದಾಖಲಿಸಿದ್ದಾರೆ.

ಕಾಣೆಯಾದ ಯುವಕ ಮೈಯಿಂದ ಸಾದಾರಣ ಮೈಕಟ್ಟು, ಕೋಲುಮುಖ, ನೆಟ್ಟನೆಯ ಮೂಗು, ಸಾದಗಪ್ಪು ಮೈ ಬಣ್ಣ, ತಲೆಯಲ್ಲಿ ಕರಿ-ಬಿಳಿ ಕೂದಲು, ಚಿಗುರು ಮೀಸೆ, ಕುರುಚಲ ಗಡ್ಡ ಬಿಟ್ಟಿದ್ದು, ಕನ್ನಡಕ ಧರಿಸಿದ್ದು, ಕನ್ನಡ, ಹಿಂದಿ, ಇಂಗ್ಲೀಷ್, ಲಂಬಾಣಿ ಭಾಷೆ ಮಾತನಾಡುತ್ತಾನೆ. ಬಲಗೈಯಲ್ಲಿ ಮಾಮ ಮತ್ತು ಡ್ಯಾಡ್ ಅಂತ ಇಂಗ್ಲಿಷ್‌ನಲ್ಲಿ ಟ್ಯಾಟೋ ಹಾಕಿಸಿದ್ದು ಇರುತ್ತದೆ. ಸಾರ್ವಜನಿಕರು ಈ ವ್ಯಕ್ತಿಯ ಸುಳಿವು ಸಿಕ್ಕಲ್ಲಿ ಗೋಲಗುಮ್ಮಜ್ ದೂರವಾಣಿ ಠಾಣೆ ಸಂಖ್ಯೆ 08352-250214, 08352-250252, 08352-253100, 08352-250152, 0831-2405201 ಸಂಖ್ಯೆಗೆ ಕರೆಮಾಡಿ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಧು-ವರರ ಮಾಹಿತಿ ಕೇಂದ್ರದಲ್ಲಿ ಭಗೀರಥ ಜಯಂತಿ ಆಚರಣೆ

**ತಾಳಿಕೋಟೆ :** ಪಟ್ಟಣದ ಶ್ರೀ ಭಗೀರಥ ಸರ್ವ ಧರ್ಮ ವಧು-ವರರಉಚಿತಮಾಹಿತಿಕೇಂದ್ರದಲ್ಲಿ ರಾಜಋಷಿಶ್ರೀಭಗೀರಥಮಹರ್ಷಿ ಅವರಜಯಂತ್ಯೋತ್ಸವವನ್ನುಭಕ್ತಿ ಭಾವದೊಂದಿಗೆ ಸಂಭ್ರಮದಿಂದ ಆಚರಿಸಲಾಯಿತು. ಶ್ರೀ ಭಗೀರಥರ ಭಾವಚಿತ್ರಕ್ಕೆ ಕೇಂದ್ರದ ಕಾರ್ಯದರ್ಶಿ ಸುನೀಲಕುಮಾರ ಯರಕ್ಯಾಳ ಅವರು ಮಹಾ ಪೂಜೆ ಸಲ್ಲಿಸಿದರು.



ಕೇಂದ್ರದ ಕಾರ್ಯದರ್ಶಿ ಸುನೀಲಕುಮಾರ ಯರಕ್ಯಾಳ ಅವರು ಮಾತನಾಡಿ ಪುರಾಣದಲ್ಲಿ ಭಗೀರಥ ಕಥೆಗೆ ವಿಶೇಷ ಪ್ರಾಮುಖ್ಯತೆಂಟು. ರಾಜ ಋಷಿ ಕಠಿಣ ತಪಸ್ಸನ್ನು ಮಾಡಿ ಗಂಗೆಯನ್ನು ದೇವಲೋಕದಿಂದ ಭೂಲೋಕಕ್ಕೆ ತಂದ ಧೀರ, ಸಕಲ ಜೀವರಾಸಿಗಳಿಗೆ ನೀರಿನ ದಾಹವನ್ನು ತೀರಿಸಿರುವಂತಹ ಶ್ರೇಷ್ಠ ಸಂತ ಮಹಾನ ಮಾನವತಾವಾದಿ ಭಗೀರಥ ಮಹರ್ಷಿಯಾಗಿದ್ದಾರೆ ಸಕಲ ಜೀವರಾಶಿಗಳಿಗೆ ಲೇಸನ್ನು ಬಯಸಿದ ಮಹಾನ್ ಮೇದಾವಿ ಎಂದು ಹೇಳಿದರು.

ಕೇಂದ್ರದ ಅಧ್ಯಕ್ಷರಾದ ಬಸಯ್ಯ ಹಿರೇಮಠ ಮಾತನಾಡಿ ಶ್ರೀ ಭಗೀರಥ ಮಹರ್ಷಿಗಳು ಬಹುದೊಡ್ಡಮಹಾರಾಜಅವನಿಗೆ ಸಕಲ ವೈಭವಗಳಿದ್ದರು ಒಂದು ಕೊರಗಿತ್ತು. ಅವರ ತಂದೆ ಮತ್ತು ತಾತಂದಿರು ದೇವಗಂಗೆಯನ್ನು ಪಡೆಯಬೇಕು ಎಂದು ಆಸೆ ಪಡತ್ತ ಅದು ಈಡೇರದೆ ಜೀವವನ್ನು ಬಿಟ್ಟಿದ್ದರು ಹೇಗಾದರೂ ಮಾಡಿ ನಾನಾದರೂ ದೇವಗಂಗೆಯನ್ನು ಪಡೆದುಕೋಳ್ಳಬೇಕು. ಎಂದು ಭಗೀರಥ ಪ್ರತಿಜ್ಞೆ ಮಾಡಿದ, ಘೋರವಾದ ತಪಸ್ಸು ಮಾಡಿ ಅವರನ ತಪಸ್ಸಿಗೆ ಮೆಚ್ಚಿ ಗಂಗಾಮಾತೆ ಆಕಾಶದಿಂದ ಭೂವಿಗೆ ಧುಮಕಿ ಬಂದಳು ಂತಹ ತಪಸ್ವಿಯನ್ನು ನಿತ್ಯ ನೆನೆಯುವಂತಹ ಪೂಜಿಸುವಂತಹ ಕಾರ್ಯ ನಾವು ನಿವೇಲ್ಲರೂ ಮಾಡಬೇಕಾಗಿದೆ ಎಂದರು.

ಕೇಂದ್ರದ ಸಂಚಾಯಕರಾದ ವಿ.ಜಿ. ಗಣಾಚಾರಿ ಭಗೀರಥ ಮಹರ್ಷಿಯ ಜೀವನದ ಚೇರಿತ್ರೆ ಕುರಿತು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಸಾಯಿಬಣ್ಣ ಕಟ್ಟಿಮನಿ, ಸಿದ್ಧಣ್ಣ ಬಸರಿಕಟ್ಟಿ, ಪೀರಅಹ್ಮದ ಖಾಜಿ, ಪಕಾಶ ಬಬಲೇಶ್ವರ, ಜೇತುನ ನದಾಫ್, ಮೊದಲಾದವರು ಇದ್ದರು.

ಕಾರ್ಯದರ್ಶಿ ಸುನೀಲ ಕುಮಾರ ಯರಕ್ಯಾಳನಿರೂಪಿಸಿದರು,ಪಕಾಶ ಬಬಲೇಶ್ವ ವಂದಿಸಿದರು.

# ಆಸ್ಕಿ, ಬೆಕಿನಾಳ, ಬೂದಿಹಾಳ(ಪಿ.ಟಿ) ಕೆರೆ ನೀರು ತುಂಬಿಸುವಂತೆ ಕೆರೆಯಲ್ಲಿಯೇ ಧರಣಿ ಕುಳಿತ ರೈತರು

**ಕಲಕೇರಿ :** ಸಮೀಪದ ಆಸ್ಕಿ ಕೆರೆಯಲ್ಲಿ ನೂರಾರು ರೈತರು ಆಸ್ಕಿ, ಬೆಕಿನಾಳ, ಹಾಗೂ ಬೂದಿಹಾಳಪಿ.ಟಿಕೆರೆನೀರುತುಂಬಿಸುವಂತೆ ಕರ್ನಾಟಕರಾಜ್ಯರೈತಸಂಘಹಾಗೂಹಸಿರು ಸೇನೆಯಿಂದ ಮಂಗಳವಾರ ಬೆಳಿಗಿನಿಂದ ಅನಿರ್ದಿಷ್ಠ ಸತ್ಯಾಗ್ರಹವನ್ನು ಹಮ್ಮಿಕೊಂಡು ಗ್ರಾಮದ ಮುಖ್ಯ ಭಜಾರದಿಂದ ಹಲಗಿ ಸದ್ದಿನೊಂದಿಗೆ ರೈತರು ವಿವಿಧ ಘೋಷಣೆಗಳನ್ನು ಕುಗುತ್ತಾ ಕೆರೆಯಡೆಗೆ ಹೆಜ್ಜೆ ಹಾಕುತ್ತಾ ಕೆರೆಗೆ ನೀರು ಹರೆಸುವವರೆಗೆ ಧರಣಿ ಮುಂದುವರೆಯುವುದು ಎಂಬುದು ಧರಣಿ ನಿರತರ ಬೇಡಿಕೆಯಾಗಿತ್ತು,



ಆಸ್ಕಿ ಗ್ರಾಮದ ರೈತ ಸಂಘದ ಅಧ್ಯಕ್ಷರಾದ ಸಂಗನಗೌಡ ಬಿರಾದಾರ ಅವರು ಮಾತನಾಡುತ್ತಾ ಈ ವರ್ಷದ ಭೀಕರ ಬರಗಾಲದ ನಿಮಿತ್ಯವಾಗಿ ಭಾಗದಲ್ಲಿ ಎಲ್ಲ ಹಳ್ಳ, ಕೆರೆಗಳು ಬತ್ತಿಹೋಗಿ ಬಾವಿ ಹಾಗೂ ಕೊಳವೆಬಾವಿಯಲ್ಲಿನನೀರು ಕಡಿಮೆಯಾಗಿ ಕೃಷಿಗೆ ನೀರಿಲ್ಲದೇ, ಜನ ಜಾನುವಾರುಗಳಿಗೆ ಕುಡಿಯಲು ಹನಿ ನೀರು ಇಲ್ಲದೇ ಹರಸಾಹಸ ಪಡುವಂತಾಗಿದೆ ಎಂದರು

ರೈತ ಸಂಘದ ತಾ. ಉಪಾಧ್ಯಕ್ಷರಾದ ಗೌಡಪ್ಪಗೌಡ ಹಳಿಮನಿ ಮಾತನಾಡುತ್ತಾ ಈ ವರ್ಷದಲ್ಲಿ ಅಡವಿಯಲ್ಲಿ ಮಾನವರಿಗೆ ಮತ್ತು ನಮ್ಮ ಧನಕರುಗಳಿಗೆ ಕುಡಿಯಲು ನೀರು ಸಿಗುತ್ತಿಲ್ಲ, ಆದ್ದರಿಂದ ಯಾರಿಗೆ ನೀರು ಕೇಳಬೇಕು ತಿಳಿಯುತ್ತಿಲ್ಲ, ಸಂಬಂದಿಸಿದ ತಾಲೂಕಾ ದಂಡಾಧಿಕಾರಿಗಳಿಗೆ, ಜಿಲ್ಲಾಧಿಕಾರಿಗಳಿಗೆ, ಸಾಕಷ್ಟು ಬಾರಿ ಮನವಿ ಸಲ್ಲಿಸಿದರು ಪ್ರಯೋಜನವಾಗಿಲ್ಲ, ಕೂಡಲೇ ಸಂಬಂಧಿಸಿದಅಧಿಕಾರಿಗಳಿಗೆಸೂಚನೆನೀಡಿ ನೀರು ಹರಿಸಬೇಕು ಎಂದದರು,

ಈ ವೇಳೆ ತಾಳಿಕೋಟಿ ತಾ ಅಧ್ಯಕ್ಷರಾದ ಶ್ರೀಶೈಲ ವಾಲಿಕಾರ ಅವರು ಮಾತನಾಡುತ್ತಾ ಈ ಕೆರೆಗಳಿಗೆ ನೀರು ಹರಿಸದಿದ್ದರೆ ಈ ಬಾಗದ ಆಸ್ಕಿ, ಬೆಕಿನಾಳ, ಬೂದಿಹಾಳ, ಜಲಪೂರ, ಬನ್ನೆಟ್ಟಿ, ನೀರಲಗಿ, ವಣಕ್ಯಾಳ ಗ್ರಾಮ ರೈತರು ಸೇರಿಕೊಂಡು ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ಹೋರಾಟ ಮಾಡುವುದು ಅನಿವಾರ್ಯವಾಗಲಿದೆ ಎಂದರು.

ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ, ಡಾ॥ ಪ್ರಭುಗೌಡ ಬಿರಾದಾರ, ಅಖಿಲ ಕರ್ನಾಟಕ ರಾಜ್ಯ ಅನ್ನದಾತ ರೈತ ಸಂಘದ ಜಿಲ್ಲಾ ಯುವ ಘಟಕದ ಅಧ್ಯಕ್ಷರಾದ ಅನ್ವರ ಅವಟಿ ಬೆಂಬಲಿಸಿ ಮಾತನಾಡಿದರು, ಶಿವಶಂಕರ ಸಜ್ಜನ, ಲಿಂಗಣ್ಣ ನಾಯಕಲ್ ಮಾತನಾಡಿದರು.

**ಅಧಿಕಾರಿಗಳ ಭೇಟಿ :** ಧರಣಿ ಸ್ಥಳಕ್ಕೆ ಗ್ರಾಮ ಲೆಕ್ಕಾಧಿಕಾರಿಗಳಾದ ಪವನ ಬೆಂಕಿ, ಮತ್ತು . ಸರ್ಕಲ್ ವಿನೋದ ಸಿಂದಗಿರಿ ಅವರು ಮನವಿ ಕೊಡಿ ಮೇಲಾಧಿಕಾರಿಗಳಿಗೆ ತಿಳಿಸುತ್ತೆವೆ ಎಂದರು, ಆಗ ರೈತರು ಅದಕ್ಕೆ ಜಗದೇ ಸ್ಥಳಕ್ಕೆ ತಹಶಿಲ್ದಾರರು, ಹಾಗೂ ಸಂಬಂಧಿಸಿದ ಕೆ.ಬಿ.ಜೆ.ಎನ್.ಎಲ್ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಆಗಮಿಸಿ ಕೆ-ರೆಗೆ ನೀರು ಹರೆಸುವವರೆಗೂ ನಾವೂ ಹೋರಾಟದಿಂದ ಎಳುವುದಿಲ್ಲ ಎಂದು ಪಟ್ಟು ಹಿಡಿದರು.

ಈ ವೇಳೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಉಪಾಧ್ಯಕ್ಷರಾದ ಶರಣಗೌಡ ಬಿರಾದಾರ, ತಾ. ಸಂಚಾಲಕರಾದ ಮಹಿಬೂಬ ಗೊಬ್ಬರಡಗಿ, ಗ್ರಾ.ಪಂ ಉಪಾಧ್ಯಕ್ಷರಾದ ಅಯ್ಯಪ್ಪ ಮುಗಳಿ, ರಾಮನಗೌಡ ಚೌದ್ರಿ, ಮಲ್ಲಪ್ಪ ಅಂಗಡಿ, ಮುತ್ತು ಹೂಗಾರ, ಗುರನಗೌಡ ಬಿರಾದಾರ, ಮಂಜು ಪಡಶೆಟ್ಟಿ, ಮಹದೇವಪ್ಪ ಮಾದರ, ವೆಂಕಣ್ಣ ಗುತ್ತ್ಯಾಳ, ಬಸವರಾಜ ಹಡಪದ, ಶಾಂತಗೌಡ ಬಿರಾದಾರ, ಪ್ರಭುಗೌಡ ಬಿರಾದಾರ, ಪ್ರಭುಗೌಡ ಹಳಿಮನಿ, ಶಂಕರ ಮಗದಾಳ, ದೇವಿಂದ್ರ ತುರಕನಗೇರಿ, ಬೆಕಿನಾಳ ಗ್ರಾಮದ ದೇವಿಂದ್ರಪ್ಪಗೌಡ ಪಾಟೀಲ, ಶ್ರೀಶೈಲ ಸಜ್ಜನ, ಮಲ್ಲಪ್ಪ ಮುದನೂರ, ಶ್ರೀಶೈಲ ಹಿರೇಮಠ, ರಾಮನಗೌಡ ಕರಕಳ್ಳಿ, ಲಕ್ಷ್ಮಣ ಚಲವಾದಿ, ಮರಲಿಂಗಪ್ಪ ನಾಟಿ-ಕಾರ, ಮಡಿವಾಳಪ್ಪ ಸಜ್ಜನ, ಬೂದಿಹಾಳ ಗ್ರಾಮದ ಬಸನಗೌಡ ಪಾಟೀಲ, ಸಂತೋಷ ಕುಳಗೇರಿ, ಭೀಮನಗೌಡ ಬಿರಾದಾರ, ಶರಣಪ್ಪ ಹಯ್ಯಾಳ, ಜಟ್ಟೆಪ್ಪ ಮಾದರ ಸೇರಿದಂತೆ ಅನೇಕರು ಇದ್ದರು.

# ರಾಜಕಾಲುವೆಗಳ ಸ್ವಚ್ಚತೆ ಆದ್ಯತೆ ನೀಡಿ: ಜಿಲ್ಲಾಧಿಕಾರಿ ಟಿ. ಭೂಬಾಲನ್

**ವಿಜಯಪುರ :** ಮುಂಬರುವ ದಿನಗಳಲ್ಲಿ ರಾಜ್ಯಾದ್ಯಂತ ಮುಂಗಾರು ಪೂರ್ವ ಹೆಚ್ಚಿನ ಮಳೆಯಾಗುವ ಮುನ್ಸೂಚನೆ ಇದ್ದು, ಜಿಲ್ಲೆಯಲ್ಲಿ ಮಳೆಯಿಂದಾಗುವ ಪ್ರವಾಹ ಪರಿಸ್ಥಿತಿಯನ್ನು ಎದುರಿಸಲು ಎಲ್ಲ ಇಲಾಖಾ ಅಧಿಕಾರಿಗಳು ಸನ್ನದರಾಗಬೇಕು. ನಗರ ಹಾಗೂ ಪಟ್ಟಣ, ಹಳ್ಳಿಗಳಲ್ಲಿರುವ ರಾಜಕಾಲುವೆಗಳ ಸ್ವಚ್ಚತೆಗೆ ಆಧ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚಿಸಿದರು.



ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಸಂಜೆ ಜರುಗಿದ ಬರಪರಿಸ್ಥಿತಿ ಹಾಗೂ ಮುಂಗಾರು ಪೂರ್ವ ಸಿದ್ಧತೆ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹವಮಾನ ಇಲಾಖೆ ಮುನ್ಸೂಚನೆ ಪ್ರಕಾರ ಜೂನ್, ಜುಲೈ ಹಾಗೂ ಅಗಸ್ಟ್ ತಿಂಗಳಲ್ಲಿ ಹೆಚ್ಚಿನ ಮಳೆ ಆಗುವ ಸಂಭವ ಇದೆ. ನಗರ ಪ್ರದೇಶಗಳಲ್ಲಿ ಮಳೆನೀರು ಸರಾಗವಾಗಿ ಹರಿಯುವಂತೆ ಚರಂಡಿ ಹಾಗೂ ರಾಜಕಾಲುವೆಗಳನ್ನು ಸ್ವಚ್ಚತೆ ಮಾಡಬೇಕು. ಯಾವುದೇ ಕಾರಣಕ್ಕು ರಸ್ತೆ ಹಾಗೂ ಮನೆಗಳ ಒಳಗೆ ಮಳೆನೀರು ನುಗ್ಗದಂತೆ ನೋಡಿಕೊಳ್ಳಬೇಕು ಎಂದರು. ಪ್ರವಾಹ ಪರಿಸ್ಥಿತಿ ಉಂಟಾದರೆ ಯಾವುದೇ ರೀತಿಯ ಜೀವ ಹಾನಿಯಾಗದಂತೆ ತಡೆಯಲು ಹಾಗೂ ಪ್ರವಾಹ ಪರಿಸ್ಥಿತಿ ಉಂಟಾಗುವ ಸ್ಥಳಗಳ ಬಗ್ಗೆ ಮಾಹಿತಿ ಪಡೆದು ಮುನ್ನೆಚ್ಚರಿಕೆಯಾಗಿ ಅಲ್ಲಿ ಅಗತ್ಯ ಸಿದ್ಧತೆಗಳಾದ ದೋಣಿ, ಲೈಫ್ ಜಾ-ಕೆಟ್, ಹಾಗೂ ನುರಿತ ಈಜುಗಾರರ ಪಟ್ಟಿಯನ್ನು ಸಿದ್ಧಪಡಿಸಿಕೊಳ್ಳಬೇಕು ಎಂದು ಹೇಳಿದರು.

**ಸಿಡಿಲು ಆಘಾತ ತಡೆಗಟ್ಟಿ:**

ಮಳೆ, ಗುಡುಗು, ಮಿಂಚು ಪರಿಸ್ಥಿತಿಯಲ್ಲಿ ಯಾವುದೇ ರೀತಿಯ ಜೀವ ಹಾನಿಯಾಗದಂತೆ ತಡೆಯಲು ಮುಂಜಾಗ್ರತ ಕ್ರಮಗಳ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚಿನ ಪ್ರಚಾರ ಕೈಗೊಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಿಡಿಲಿನ ಆಘಾತದ ಬಗ್ಗೆ ಜನ ಜಾನುವಾರು ಜೀವಹಾನಿ ತಪ್ಪಿಸಲು ಎಲ್ಲ ತಹಶೀಲ್ದಾರರು, ತಾ.ಪಂ. ಇಓಗಳು, ನಗರ ಸ್ಥಳೀಯ ಸಂಸ್ಥೆ ಅಧಿಕಾರಿಗಳು ರೈತರಲ್ಲಿ ಹಾಗೂ ಸಾರ್ವಜನಿಕರಲ್ಲಿ ಧ್ವನಿವರ್ಧಕ ಬಳಸಿ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ರೈತ ಸಂಬಧಿತ ಎಲ್ಲ ಸಂಘ, ಸಂಸ್ಥೆಗಳಲ್ಲಿ ಮಳೆ, ಗುಡುಗು, ಮಿಂಚಿನಿಂದ ತಪ್ಪಿಸಿಕೊಳ್ಳುವ ಮುಂಜಾಗೃತ ಕ್ರಮಗಳ ಬಗ್ಗೆ ಪ್ರಚಾರ ಮಾಡಬೇಕು. ಮಳೆ ಬಂದಾಗ ರೈತರು ಹೊಲ, ಗದ್ದೆಗಳ ಬಯಲಲ್ಲಿ ಇರದೆ ಸುರಕ್ಷತಾ ಸ್ಥಳದಲ್ಲಿರಬೇಕು ಎಂದು ತಿಳಿಸಿದರು.

ಗ್ರಾಮಗಳಲ್ಲಿ ಕೆರೆಗಳು ಭರ್ತಿಯಾಗುವ ಹಾಗೂ ದುರ್ಬಲ ಬಂಡ/ಬದುಗಳನ್ನು ಮುಂಜಾಗ್ರತವಾಗಿ ಪರಿಶೀಲಿಸಬೇಕು. ಅಗತ್ಯವಿದ್ದಲ್ಲಿ ಈಗಲೇ ದುರಸ್ಥಿ ಕಾರ್ಯ ಕೈಗೊಳ್ಳಬೇಕೆಂದರು.

ಹೆಸ್ಕಾಂ ಅಧಿಕಾರಿಗಳು ಅಪಾಯಕಾರಿ ವಿದ್ಯುತ್ ಕಂಬಗಳ ಬಗ್ಗೆ ಈಗಲೇ ಗಮನ ವಹಿಸಿ, ಸ್ಥಳಾಂತರಗೊಳ್ಳಿಸಬೇಕು. ಹಳೆಯ ಮರಗಳ ಕೊಂಬೆಗಳು ಮುರಿದು ವಿದ್ಯುತ್ ತಂತಿಗಳ ಮೇಲೆ ಬೀಳುವುದನ್ನು ತಪ್ಪಿಸಬೇಕು. ಅಥವಾ ಅಂತಹ ರಂಬೆ ಕೊಂಬೆಗಳನ್ನು ಕತ್ತರಿಸಬೇಕು ಎಂದರು.

ವಿದ್ಯುತ್ ಸಂಪರ್ಕದಿಂದ ಯಾವುದೇ ಅನಾಹುತಗಳು ಆಗದಂತೆ ವಿವಿಧ ಸ್ಥಳಗಳನ್ನು ಗುರುತಿಸಿ, ಗಲೇ ಕ್ರಮಕೈಗೊಳ್ಳತಕ್ಕದ್ದು, ಎಲ್ಲ ತಾಲೂಕಾ ಟಾಸ್ಕ್‌ಪೋರ್ಸ್‌ಗಳು ಈಗಾಗಲೇ ಮುಂಜಾಗೃತೆಯಾಗಿ ಸಿದ್ಧಗೊಳ್ಳಬೇಕೆಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯ ನಿರ್ವಾಹಕ ಅಧಿಕಾರಿ ಋಷಿ ಆನಂದ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ರಬಕವಿ: ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನ



**ರಬಕವಿ-ಬನಹಟ್ಟಿ :** ಎಸ್.ಎಸ್.ಎಲ್.ಸಿ. ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳು ತಮ್ಮ ಜವಾಬ್ದಾರಿಯನ್ನು ಮರೆಯದೆ ಮುಂದಿನ ಪರೀಕ್ಷೆಗಳಲ್ಲಿ ಕೂಡ ಉತ್ತಮ ಸಾಧನೆ ಮಾಡಬೇಕೆಂದು ನಿವೃತ್ತ ಪ್ರಾಚಾರ್ಯ ಡಾ. ಎಸ್. ಬಿ. ಸುಗ್ಗಮದ ಹೇಳಿದರು.

ರಬಕವಿಯ ಬನಶಂಕರಿ ದೇವಸ್ಥಾನದಲ್ಲಿ ಏರ್ಪಡಿಸಿದ್ದ ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ. ಹಾಗು ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು. ಈ ವರ್ಷ ಹೆಚ್ಚು ಭದ್ರತೆಯಲ್ಲಿ ಪರೀಕ್ಷೆಗಳು ನಡೆದಿವೆ. ಈ ದಿಶೆಯಲ್ಲಿ ಫಲಿತಾಂಶ ಸ್ವಲ್ಪ ಪ್ರಮಾಣದಲ್ಲಿ ಕಡಿಮೆಯಾಗಿದೆ. ಆದರೆ ಗ್ರಾಮೀಣ ಭಾಗದ ಶಾಲೆಗಳ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ. ಮುಂದಿನ ದಿನಗಳಲ್ಲಿಯೂ ಅದು ಮೂಡಿಬರಲಿ. ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಂಡು ಸಾಧನೆ ಮಾಡಿ ಎಂದು ಸಲಹೆ ನೀಡಿದರು.

ಅರ್ಥಶಾಸ್ತ್ರಜ್ಞ ಪ್ರೊ. ಎಂ. ಎಸ್. ಬದಾಮಿ ಮಾತನಾಡಿ, ಈ ಪರೀಕ್ಷೆಗಳು ಮುಂದಿನ ಜೀವನಕ್ಕೆ ಪ್ರಮುಖ ಘಟ್ಟವಾಗಿದೆ. ಇಲ್ಲಿಂದ ನಿಮ್ಮ ಶೈಕ್ಷಣಿಕ ಪ್ರಯಾಣ ಆರಂಭವಾಗಿ ಮುಂದೆ ದೊಡ್ಡಮಟ್ಟದಲ್ಲಿ ಸಾಧನೆ ಮಾಡುವ ಹಾದಿಯಾಗಲಿದೆ. ವಿದ್ಯಾರ್ಥಿಗಳು ಮುಂದಿನ ಸಾಧನೆಗೆಮುಂದಾಗಬೇಕೆಂದರು.

ಈ ಸಂದರ್ಭದಲ್ಲಿ ಮೂವತ್ತಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಹಟಗಾರ ಸಮಾಜದ ಅಧ್ಯಕ್ಷ ಚನಬಸಪ್ಪ ವಿಜಾಪೂರ ಅಧ್ಯಕ್ಷತೆ ವಹಿಸಿದ್ದರು. ಡಾ. ಜಿ. ಎಚ್. ಚಿತ್ತರಗಿ, ಮಾಜಿ ನಗರಾಧ್ಯಕ್ಷ ಶ್ರೀಶೈಲ ಬೀಳಗಿ, ಮಹಾಲಿಂಗಪ್ಪ ಕೊಕಟನೂರ, ಮಹಾಲಿಂಗಪ್ಪ ವಂದಾಲ, ಮಹಾದೇವ ಬಾಪೂರಿ, ಸುರೇಶ ಕಾಗಲೆ, ರೇವಣಪ್ಪ ಬಾಪೂರಿ, ಶಿವಪ್ಪ ಕಡಕೋಳ, ಸಂಜು ಕಳ್ಳಿಗುದ್ದಿ, ಸಂಗಮೇಶ ಚಿತ್ತರಗಿ ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.

# ಮಾನವೀಯತೆ ಬೆಳೆಸಿಕೊಳ್ಳಬೇಕು

**ಮುಧೋಳ :** ಮಾನವನ ಎದೆಯಲ್ಲಿ ಮದ ತುಂಬಿಕೊಂಡಿದ್ದರೆ ಬದುಕು ಹದವಾಗುವುದಿಲ್ಲ. ಅಧಿಕಾರ ಮದ, ಕುಲ ಮದ, ರೂಪ ಮದ, ಯೌವ್ವನದ ಮದ ಮೊದಲಾದ ಮದಗಳನ್ನು ಬಿಟ್ಟಾಗ ಮಾನವ ಮನುಷ್ಯನಾಗುತ್ತಾನೆ ಎಂದು ಅಂತಾಪುರದ ಪರಮ ಪೂಜ್ಯ ಭೀಮಸೇನ ಮಹಾರಾಜರು ಹೇಳಿದರು. ಅವರು ಮುಧೋಳ ತಾಲೂಕಿನ ಮುಗಳಖೋಡದ ಶ್ರೀ ಪಾಂಡುರಂಗ ಮಂದಿರದಲ್ಲಿ ಜರುಗಿದ ಪಾಂಡುರಂಗನ ಸಪ್ತಾಹದ ಎರಡನೇ ದಿನದ ಹರಿಕೀರ್ತನೆಯನ್ನ ಮಾಡುತ್ತಾ ಏಕಾದಶಿ ವ್ರತ, ಪತಿ ವೃತ, ಸತ್ಯ ವೃತ ಹೀಗೆ ಹಲವಾರು ವ್ರತಗಳು ಮನುಷ್ಯನನ್ನು ಪರಿಶುದ್ಧನನ್ನಾಗಿ ಮಾಡುತ್ತವೆ. ಸತ್ಯವೃತವನ್ನು ಪಾಲಿಸಿದ ಹರಿಶ್ಚಂದ್ರರಾಜ ರಾಜ್ಯ, ಕೋಶ, ಅಧಿಕಾರ, ಹಣ, ಹೆಂಡತಿ, ಮಗ ಎಲ್ಲವನ್ನೂ ಕಳೆದುಕೊಂಡ. ಸತ್ಯಕ್ಕಾಗಿ ಹೆಂಡತಿಯ ಶಿರವನ್ನು ಕತ್ತರಿಸುವ ಮಟ್ಟಕ್ಕೆ ನಿಂತಾಗ ಶಿವನ ಸಾಕ್ಷಾತ್ಕಾರವಾಯಿತು. ಸತ್ಯ ವೃತದಿಂದ ಭಗವಂತನ ಸಾಕ್ಷಾತ್ಕಾರವಾಗುತ್ತದೆ ಎಂದು ಹೇಳಿದರು. ವಿವಿಧ ಗ್ರಾಮಗಳ ಸಂತರಿಂದ ಹರಿ ಭಜನೆ ಜರುಗಿತು. ನಂತರ ಮಂಗಲ ಮಹಾಪ್ರಸಾದ ನೆರವೇರಿತು.

# ಜಿಲ್ಲಾಸ್ಪತ್ರೆಗೆ ಡಿ.ಸಿ. ನಲಿನ್ ಅತುಲ್ ಭೇಟಿ: ಪರಿಶೀಲನೆ



**ಕೊಪ್ಪಳ :** ಕೊಪ್ಪಳ ಜಿಲ್ಲಾಸ್ಪತ್ರೆಗೆ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಮೇ 20 ರಂದು ಭೇಟಿ ನೀಡಿ ಪರಿಶೀಲಿಸಿದರು.

ಜಿಲ್ಲಾಸ್ಪತ್ರೆಗೆ ಭೇಟಿ ನೀಡಿದ ಅವರು ಸ್ವತಃ ತಾವೇ ಖುದ್ದಾಗಿ ರೋಗಿಗಳ ವಾರ್ಡ್‌ಗೆ ಭೇಟಿ ನೀಡಿ ಅವರ ಆರೋಗ್ಯ ವಿಚಾರಿಸುವುದರ ಜೊತೆಗೆ ಅಲ್ಲಿ ರೋಗಿಗಳಿಗೆ ನೀಡುತ್ತಿರುವ ಚಿಕಿತ್ಸಾ ಸೌಲಭ್ಯಗಳ ಕುರಿತು ಪರಿಶೀಲಿಸಿದರು. ಔಷಧ ಉಗ್ರಾಣವನ್ನು ಪರಿಶೀಲನೆ ನಡೆಸಿ, ಸಾರ್ವಜನಿಕರಿಗೆ ಉತ್ತಮವಾದ ಚಿಕಿತ್ಸೆ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಕಿಮ್ಸ್ ನಿರ್ದೇಶಕರಾದ ವೈಜನಾಥ ಇಟಗಿ, ಜಿಲ್ಲಾಧಿಕಾರಿಗಳ ಆಪ್ತ ಸಹಾಯಕರಾದ ಜಯಲಕ್ಷ್ಮೀ, ಸೇರಿದಂತೆ ವೈದ್ಯಾಧಿಕಾರಿಗಳು ಇತರರು ಉಪಸ್ಥಿತರಿದ್ದರು.

# ನೇರ ಪ್ರಸಾರದಲ್ಲಿ ಶರೀರ ಛೇಧನ ಅವಶ್ಯಕ: ಡಾ. ಬಿ.ಎಸ್. ಪ್ರಸಾದ್

# ಶರೀರ ಚಿಂತನ-2024 ಉದ್ಘಾಟನಾ ಸಮಾರಂಭ



**ಬಾಗಲಕೋಟೆ :** ವೈದ್ಯಕೀಯ ವಿದ್ಯಾರ್ಥಿಗಳಿಗೆ ನೇರ ಪ್ರಸಾರದಲ್ಲಿ ಶರೀರ ಛೇಧನ ತೋರಿಸುವುದು ಶ್ರೇಷ್ಠ ಕಲಿಕೆಗೆ ಸಹಾಯಕವಾಗುತ್ತದೆ ಎಂದು ಡಾ. ಬಿ ಎಸ್ ಪ್ರಸಾದ್ ತಿಳಿಸಿದರು.

ನಗರದ ಎಂ.ಆರ್.ಎನ್. ಆಯುರ್ವೇದಿಕ್ ಮೆಡಿಕಲ್ ಕಾಲೇಜಿನಲ್ಲಿ ನಡೆದ ಶರೀರ ಚಿಂತನ 2024ರ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾತನಾಡಿದ ಎನ್ ಸಿ ಐ ಎಸ್ ಎಂ ನ ಅಧ್ಯಕ್ಷರಾದ ಡಾ. ಬಿ ಎಸ್ ಪ್ರಸಾದ್ ಮಾತನಾಡುತ್ತಾ ಈ ಕಾಲೇಜಿನಲ್ಲಿ ನಡೆಯುತ್ತಿರುವ ನೇರ ಪ್ರಸಾರದಲ್ಲಿನ ಶರೀರ ಛೇಧನ ಕಾರ್ಯಕ್ರಮ ಉತ್ತರ ಕರ್ನಾಟಕದಲ್ಲಿ ಪ್ರಥಮವಾಗಿದ್ದು ಕಾಲೇಜಿನ ಈ ಪ್ರಯತ್ನಕ್ಕೆ ಧನ್ಯವಾದಗಳು ಎಂದರು.

ನಂತರ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾತನಾಡಿದ ಕರ್ನಾಟಕ ಸರ್ಕಾರದ ಮಾಜಿ ಸಚಿವರು ಹಾಗೂ ಕಾರ್ಯಕ್ರಮದ ಮುಖ್ಯ ಪೋಷಕರಾದ ಡಾ/ ಮುರುಗೇಶ್ ಆರ್ ನಿರಾಣಿ ಮಾತನಾಡುತ್ತಾ ಕಾಲೇಜಿನಲ್ಲಿ ನಡೆಯುತ್ತಿರುವ ಪ್ರತಿ ಚಟುವಟಿಕೆಯಲ್ಲಿ ಪಾಲ್ಗೊಂಡ ತಮಗೆಲ್ಲರಿಗೂ ಒಳ್ಳೆಯ ಭವಿಷ್ಯ ದೊರಕಲಿ ಎಂದು ಆಶಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಟಿ ಐ ಇ ಐ ನ ಅಧ್ಯಕ್ಷರಾದ ಮಾಧುರಿ ಮುಧೋಳ ಮಾತನಾಡುತ್ತಾ ಕಾಲೇಜಿನ ಇಂತಹ ಪ್ರಯತ್ನಗಳಿಗೆ ಯಶಸ್ಸು ದೊರಕುವುದು ಎಲ್ಲ ವಿದ್ಯಾರ್ಥಿಗಳು ಚಟುವಟಿಕೆಗಳ ಪ್ರಯೋಜನ ಪಡೆದಾಗ ಎಂದರು.

ಕಾರ್ಯಕ್ರಮದ ಕೇಂದ್ರಬಿಂದುವಾಗಿದ್ದ ಶರೀರ ಛೇಧನ ಮಾಡುವ ನೇರ ಪ್ರಸಾರ ಕಾರ್ಯಕ್ರಮವನ್ನು ವಿಶೇಷ ಉಪನ್ಯಾಸಕರು ಹಾಗೂ ಖ್ಯಾತ ವೈದ್ಯರಾದ ಡಾ.ಮುರುಳಿಧರ್ ಬಡಿಗೇರ್, ಡಾ. ಹರ್ಷವರ್ಧನ್ ಬ್ಯಾಳಿಹಾಳ, ಡಾ.ಬಿ ಜಿ ಕುಲಕರ್ಣಿ, ಡಾ.ರವಿರಾಜ್ ಕುರುಬೆಟ್ ವಿಷಯ ವಿಶ್ಲೇಷಣೆಯ ಮೂಲಕ ಶರೀರಛೇಧನ ಹಾಗೂ ನರಗಳ ಹಾಗೂ ಮೆದುಳಿನ ಕಾರ್ಯವನ್ನು ತಿಳಿಸಿಕೊಟ್ಟರು.

ರಾಷ್ಟ್ರೀಯ ಮಟ್ಟದ ಈ ಕಾರ್ಯಗಾರದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಪ್ರಹ್ಲಾದ ಗಂಗಾವತಿ, ಕಾಲೇಜಿನ ಎಲ್ಲ ಉಪನ್ಯಾಸಕ ವರ್ಗ ಹಾಗೂ ಹೊರ ರಾಜ್ಯಗಳ ಸುಮಾರು 50 ಕಾಲೇಜುಗಳ 1500 ವಿದ್ಯಾರ್ಥಿಗಳು ಭಾಗಿಯಾಗಿದ್ದರು.

ಆಯುರ್ವೇದಿಕ್ಕಿಗೆ ಸಂಬಂಧಪಟ್ಟ ಕಾಗದ ಪ್ರಸ್ತುತತೆಯ ಸ್ಪರ್ಧೆಯನ್ನು ನಡೆಸಲಾಯಿತು.

ಡಾ. ರಜನಿ ದಡೇದ ಹಾಗೂ ಡಾ. ಅಂಜನಾ ಕಾರ್ಯಕ್ರಮವನ್ನು ನಿರೂಪಿಸಿದರು. ಡಾ.ಈಶ್ವರ ಪಾಟೀಲ್ ಸ್ವಾಗತಿಸಿದರು. ಡಾ. ದೀಪಾ ಗಂಗಾಲ್, ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾಲೇಜಿನ ಡೀನ್/ ಆಡಳಿತಾಧಿಕಾರಿಯಾದ ಡಾ. ಶಿವಕುಮಾರ್ ಗಂಗಾಲ ವಂದಿಸಿದರು.

# ವಿಶೇಷ ಡಿ.ಎಡ್ ಕೋರ್ಸಿಗೆ ಅರ್ಜಿ ಆಹ್ವಾನ

**ಕೊಪ್ಪಳ :** ಮೈಸೂರಿನ ಅಂಧ ಹಾಗೂ ಶ್ರವಣದೋಷವುಳ್ಳ ಮಕ್ಕಳ ಶಿಕ್ಷಕರ ತರಬೇತಿ ಕೇಂದ್ರದಲ್ಲಿ 2 ವರ್ಷಗಳ ವಿಶೇಷ ಡಿ.ಎಡ್ ಕಾರ್ಯಕ್ರಮಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ವಿಶೇಷ ಡಿ.ಎಡ್ ಕಾರ್ಯಕ್ರಮಗಳು ಸಾಮಾನ್ಯ ಡಿ.ಎಡ್‌ಗೆ ಸಮಾನಾಂತರವಾಗಿದೆ. ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಶೇ.50 (ಎಸ್.ಸಿ ಎಸ್.ಟಿ ಮತ್ತು ವಿಕಲಚೇತನ ವಿದ್ಯಾರ್ಥಿಗಳಿಗೆ ಶೇ.45) ಅಂಕಗಳೊಂದಿಗೆ ತೇರ್ಗಡೆಯಾದ ವಿದ್ಯಾರ್ಥಿಗಳು ಜೂನ್ 10 ರ ಮಧ್ಯಾಹ್ನ 2 ಗಂಟೆ ಒಳಗೆ ಅರ್ಜಿ ಸಲ್ಲಿಸಬಹುದು. ಅರ್ಜಿಗಳು https://mysore.nic.in/en/ ವೆಬ್‌ಸೈಟ್‌ನಲ್ಲಿ ಪಡೆಯಬಹುದು. ಈ ಅವಕಾಶವನ್ನು ಜಿಲ್ಲೆಯ ವಿಕಲಚೇತನರು ಸದುಪಯೋಗಪಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಛೇರಿ, ಪುಲಿಕೇಶಿ ರಸ್ತೆ, ತಿಲಕ್‌ನಗರ, ಮೈಸೂರು ರವರ ದೂರವಾಣಿ ಸಂಖ್ಯೆ:0821-2491600/2959600 ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ ಎಸ್.ಎನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# "ಒಬ್ಬಟ್ಟು" ಚಲನಚಿತ್ರಕ್ಕೆ ಯು/ಎ ಸರ್ಟಿಫಿಕೇಟ್





**ಬೆಂಗಳೂರ :** ಕೀರ್ತನಾ ಮೂವ್ಹಿ ಮೇಕರ್ಸ್ ಬೆಂಗಳೂರ ಅವರ ಲೋಕೇಶ್ ವಿದ್ಯಾಧರ ನಿರ್ದೇಶನದ 'ಒಬ್ಬಟ್ಟು' ಕನ್ನಡ ಚಲನಚಿತಕ್ಕೆ ಸೆನ್ಸಾರ್ ಮಂಡಳಿಯು ಯು/ಎ ಸರ್ಟಿಫಿಕೇಟ್ ನೀಡಿದೆ.

ಹಾಸ್ಯಭರಿತ ಕಥಾಸಾರ ಹೊಂದಿದ ಈ 'ಒಬ್ಬಟ್ಟು' ಚಿತ್ರೀಕರಣವನ್ನು ಮಂಡ್ಯ ಜಿಲ್ಲೆ ಮಳವಳ್ಳಿ ತಾಲ್ಲೂಕು, ಹಲಗೂರು ಹೋಬಳಿ ಸಾಗ್ಯ ಸರಗೂರು ಗ್ರಾಮದಲ್ಲಿ ಮಾಡಲಾಗಿದೆ. ಯುಗಾದಿ ಹಬ್ಬದಲ್ಲಿ ನಡೆಯವ ಒಂದು ಪ್ರೇಮ ಕಥೆ. ಇಬ್ಬರು ಪ್ರೇಮಿಗಳ ಮಧ್ಯೆ ಬೀಳುವ ಒಂದು ಹೆಣದ ಸುತ್ತ ನಡೆಯುವ ಹಾಸ್ಯ ಭರಿತ ಚಿತ್ರ ಇದಾಗಿದ್ದು ಕೊಲೆ ಹೇಗಾಯಿತು ? ಯಾಕಾಯಿತು ? ಎನ್ನುವ ಕುತೂಹಲದ ನಡುವೆ ಕೊಲೆ ರಹಸ್ಯ ಭೇದಿಸುವ ಒಂದು ಹಾಸ್ಯಪೂರಿತ ಮನರಂಜನೆಯನ್ನೊಳಗೊಂಡ ಕಥೆ. ಒಬ್ಬಟ್ಟಿನ ರುಚಿಯನ್ನು ಥೇಟರಗಳಲ್ಲೇ ಪ್ರೇಕ್ಷಕರು ಬಂದು ನಗೆಹೂರಣದ ಸವಿಯನ್ನು ಸವಿಯಬೇಕು. ಈಗಾಗಲೇ ಮಾಸ್ ಮ್ಯೂಸಿಕ್ ಅಡ್ಡಾ ಯೂಟ್ಯೂಬ್‌ದಲ್ಲಿ 'ಬಾರೋ ಮಗಾ ಬಾರೋ ಮಗಾ', 'ನನ್ನಾಕೆ ಪ್ರೀತಿ ಸಿಹಿ ಒಬ್ಬಟ್ಟಂಗೆ' ಲಿರಿಕಲ್ ವಿಡೀಯೋ ಹಾಡುಗಳು ಬಿಡುಗಡೆಯಾಗಿ ಒಳ್ಳೆಯ ಪ್ರತಿಕ್ರಿಯೆ ದೊರೆಯುತ್ತಿದ್ದು ಇದೀಗ ಸೆನ್ಸಾರ್ ಆಗಿದ್ದು ಶೀಘ್ರದಲ್ಲೇ ರಾಜ್ಯಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆ ಮಾಡುವದಾಗಿ ನಿರ್ದೇಶಕ, ನಿರ್ಮಾಪಕ ಲೋಕೇಶ ವಿದ್ಯಾಧರ ಹೇಳುತ್ತಾರೆ.

ಚಿತ್ರದಲ್ಲಿ ನಾಯಕ ಅಮೀತ್‌ರಾವ್, ಕಿರುತೆರೆ, ಚಲನಚಿತ್ರ ಕಲಾವಿದೆ ಸುನಂದ ಕಲ್ಬುರ್ಗಿ, ಲೋಕೇಶ್ ವಿದ್ಯಾಧರ, ಮಂಡ್ಯ ನಾಗರಾಜ್, ಮುತ್ತುರಾಜ್.ಟಿ, ರಾಜು ಅರಸಿಕೆರೆ, ರೋಹಿಣಿ, ಧನಲಕ್ಷ್ಮೀ, ಮಂಜುಳಾ ಕೆಂಪೇಗೌಡ್ರು, ಸತೀಶ್ ಶೆಟ್ಟಿ, ರವಿ ,ನಂಜಪ್ಪ ಡಿ.ಎಸ್ ಮುಂತಾದವರು ಅಭಿನಯಿಸಿದ್ದಾರೆ. ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ ಬೆಟ್ಟೇಗೌಡ ಕೀಲಾರ , ಸ್ವರ ಸಂಯೋಜನೆ ಮತ್ತು ಹಾಡುಗಾರಿಕೆ ಎ.ಪಿ.ರವಿಕೀರ್ತಿ , ನೃತ್ಯ ಅಲ್ಲಿನ್.ಎ , ಸಾಹಸ ಸೂರ್ಯ , ಸಂಕಲನ ಸಂಜೀವರೆಡ್ಡಿ , ಪ್ರಸಾಧನ ಯತೀಶ , ಸಹಕಾರ ಆನಂದ ಆರ್ಟ್ಸ್, ಪತ್ರಿಕಾ ಸಂಪರ್ಕ ಡಾ.ಪ್ರಭು ಗಂಜಿಹಾಳ, ಡಾ. ವೀರೇಶ್ ಹಂಡಿಗಿ , ಕಥೆ, ಚಿತ್ರಕಥೆ, ಸಂಭಾಷಣೆ, ನಿರ್ದೇಶನ ಲೋಕೇಶ್ ವಿದ್ಯಾಧರ , ನಿರ್ಮಾಪಕರು ಸುನಂದಾ ಕಲ್ಬುರ್ಗಿ ಮತ್ತು ಲೋಕೇಶ್ ವಿದ್ಯಾಧರ ಆಗಿದ್ದಾರೆ.

**ವರದಿ : ಡಾ.ಪ್ರಭು ಗಂಜಿಹಾಳ**
**ಮೊ : 9448775346**

# ಕನ್ನಡ ಕಾರ್ಯಭಾರ (ವರ್ಕಲೋಡ್) ಕಡಿತ: ವಿದ್ಯಾರ್ಥಿ, ಉಪನ್ಯಾಸಕರಿಗೆ ತೀವ್ರ ಹೊಡೆತ

**ರಾಯಬಾಗ :** ಈ ಕನ್ನಡ ನೆಲದಲ್ಲಿ ಕನ್ನಡ ಭಾಷೆಗೆ ಅಗ್ರ ಸ್ಥಾನ ಮಾನ ಸರ್ವಕಾಲಕ್ಕೂ ಸಿಗಬೇಕು. ಶಾಸ್ತ್ರೀಯ ಸ್ಥಾನ ಮಾನ ಗೌರವಕ್ಕೆ ಪಾತ್ರವಾದ ನಮ್ಮ ಕನ್ನಡ ಭಾಷೆಯ ಶ್ರೀಮಂತಿಕೆ ವರ್ಣಿಸಲಸದಳ. ಪ್ರಸ್ತುತ ಉನ್ನತ ಶಿಕ್ಷಣ ಮಟ್ಟದಲ್ಲಿ ಪದವಿ ಬೋಧಿಸುವ ಕನ್ನಡ ಉಪನ್ಯಾಸಕರಿಗೆ ಮೊದಲಿನಿಂದಲೂ ಅನ್ಯಾಯವಾಗುತ್ತಲೇ ನಡೆದಿದೆ.

ಹೇಗೆಂದರೆ ಸಿಬಿಸಿಎಸ್ (ಸಿಲ್ಯಾಬಸ್) ಪಠ್ಯಕ್ರಮ ಇದ್ದಂತಹ ಸಂದರ್ಭದಲ್ಲಿ, ನಮ್ಮ ರಾಜ್ಯದಲ್ಲಿ ಬಿ.ಎ ಮತ್ತು ಬಿ.ಕಾಂ ತರಗತಿಗಳು ನಡೆಯುವ ಕಾಲೇಜುಗಳಲ್ಲಿ ಕನ್ನಡ ವಿಷಯ ಬೋಧಿಸಲಿಕ್ಕೆ ಒಂದು ವರ್ಷಕ್ಕೆ 58 (ವರ್ಕಲೋಡ್) ಕಾರ್ಯಭಾರ ಇರುತ್ತಿತ್ತು.

ಅಲ್ಲಿ ನಾಲ್ಕು ಜನ ಕನ್ನಡ ಉಪನ್ಯಾಸಕರು ಕೆಲಸ ಮಾಡುತ್ತಿದ್ದರು. ನಂತರ ಎನ್ ಈ ಪಿ ಬಂದಾಗ 51 ವರ್ಕ್ ಲೋಡ್ ಇತ್ತು. ಆಗ ಓರ್ವ ಉಪನ್ಯಾಸಕನ ಕೆಲಸಕ್ಕೆ ತೊಂದರೆಯಾಯಿತು, ಪ್ರಸ್ತುತ ಎಸ್ ಈ ಪಿ ಮಾರ್ಗಸೂಚಿಯ ಪ್ರಕಾರ ವರ್ಷಕ್ಕೆ 32 (ವರ್ಕಲೋಡ್) ಕಾರ್ಯಭಾರ ನಿಗಧಿಯಾದ ಪರಿಣಾಮ ಇಬ್ಬರು ಕನ್ನಡ ಉಪನ್ಯಾಸಕರ ಕೆಲಸಕ್ಕೆ ಇದೀಗ ಕುತ್ತು ಬಂದಂತಾಗಿದೆ.

ಈ ದುಃಸ್ಥಿತಿ ಹೀಗೆಯೇ ಮುಂದುವರೆದರೆ ಭವಿಷ್ಯದಲ್ಲಿ ಕನ್ನಡ ಉಪನ್ಯಾಸಕರ ಸ್ಥಿತಿ ತೀವ್ರ ಚಿಂತಾಜನಕವಾಗುವುದರಲ್ಲಿ ಸಂದೇಹವಿಲ್ಲ. ಸರ್ಕಾರಗಳು ಬರಗೂರು ರಾಮಚಂದ್ರಪ್ಪನವರ ವರದಿಯನ್ನು ಜಾರಿಗೆ ತಂದರೆ ಯಾವ ಕನ್ನಡ ಉಪನ್ಯಾಸಕರಿಗೂ ತೊಂದರೆಯಾಗಲಾರದು, ಹೇಗೆಂದರೆ ಕರ್ನಾಟಕದಲ್ಲಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಪ್ರತಿಯೊಂದು ಕೋರ್ಸುಗಳಿಗೂ ಅವಶ್ಯಕ ಕನ್ನಡ (ಬೇಸಿಕ್) ಒಂದು ವರ್ಷ ಕನ್ನಡವನ್ನು ಕಡ್ಡಾಯವಾಗಿ ಕಲಿಯಲೇಬೇಕೆಂದು ಪ್ರತಿಪಾದಿಸಿದ್ದರು. ಇದರಲ್ಲಿ ಐಟಿಐ ,ಡಿಪ್ಲೋಮಾ, ಬಿಎಎಂಎಸ್, ಎಂಬಿಬಿಎಸ್, ನರ್ಸಿಂಗ್, ಇಂಜಿನಿಯರಿಂಗ್ ಹೀಗೆ ಯಾವುದೇ ಕೋರ್ಸನ್ನು ಕಲಿಯುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಒಂದು ವರ್ಷ ಕನ್ನಡವನ್ನು (ಬೇಸಿಕ್) ಅವಶ್ಯಕ ವಿಷಯವೆಂದು ಕಲಿಯಬೇಕೆಂಬ ವಾದ. ಇದು ಜಾರಿಗೆ ಬಂದರೆ ಉನ್ನತ ಶಿಕ್ಷಣ ಪಡೆದ ಯಾವ ಕನ್ನಡಿಗನೂ ಕೆಲಸದಿಂದ ವಂಚಿತನಾಗುವುದಿಲ್ಲ ಎಂಬುವುದನ್ನು ಎಲ್ಲರೂ ಚೆನ್ನಾಗಿ ಸೂಕ್ಷ್ಮವಾಗಿ ಅರಿಯಬೇಕಾಗಿದೆ. ಸದ್ಯ ಸರಕಾರ ಬದಲಾದಂತೆ ಶಿಕ್ಷಣ ನೀತಿಯೂ ಬದಲಾಗುತ್ತಿರುವ ಈ ಕಾಲಘಟ್ಟದಲ್ಲಿ ವಿಶ್ವವಿದ್ಯಾಲಯ ಮಟ್ಟದಲ್ಲಿ ಹಾಗೂ ಪದವಿ ಹಂತದಲ್ಲಿ ಕನ್ನಡ ವಿಷಯ ಪಾಠದ ಅವಧಿಯನ್ನು ಕಡಿತಗೊಳಿಸಿ ಕನ್ನಡ ಉಪನ್ಯಾಸಕರಿಗೆ ಆಗುವ ಆತಂಕ ಒಂದೆಡೆಯಾದರೆ, ಕನ್ನಡ ಕಲಿಯುವ ವಿದ್ಯಾರ್ಥಿಗಳು ಕನ್ನಡವನ್ನು ಐಚ್ಛಿಕ ವಿಷಯವನ್ನಾಗಿ ಆಯ್ಕೆ ಮಾಡಿಕೊಳ್ಳುವ ಹುಮ್ಮಸ್ಸು ಆಸಕ್ತಿ ಕುಗ್ಗುವಂತೆ ಮಾಡಿದ್ದು ಕಟು ವಾಸ್ತವ ಸತ್ಯ. ಕನ್ನಡ ಕನ್ನಡಿಗ ಕರ್ನಾಟಕ ಎಂಬ ದಿವ್ಯ ಮಂತ್ರವನ್ನು ಕೇವಲ ಭಾಷಣಗಳಲ್ಲಿ ದೊಡ್ಡ ದೊಡ್ಡ ಬಹಿರಂಗ ವೇದಿಕೆಗಳಲ್ಲಿ ಜಪಿಸಿದರೆ ಸಾಲದು. ಸದ್ಯ ಉದ್ಭವಗೊಂಡ ಈ ಬಿಕ್ಕಟ್ಟಿಗೆ ಶಿಕ್ಷಣ ತಜ್ಞರು, ಕನ್ನಡಪರ ಹೋರಾಟಗಾರರು, ಹಾಗೂ ಕನ್ನಡ ಚಿಂತಕರು ನ್ಯಾಯ ಸಮ್ಮತವಾಗಿ ಈ ನಿಟ್ಟಿನಲ್ಲಿ ಪರಿಹಾರ ಸೂತ್ರವನ್ನು ತುರ್ತಾಗಿ ಕೊಂಡುಕೊಳ್ಳಬೇಕಾದ ಅಗತ್ಯತೆ ಇದೆ.

**- ಡಾ. ಜಯವೀರ ಎ.ಕೆ.**
**ಕನ್ನಡ ಪ್ರಾಧ್ಯಾಪಕರು**
**ಕೆ ಎಲ್ ಇ ಪದವಿ ಮಹಾವಿದ್ಯಾಲಯ**
**ಶಿರಗುಪ್ಪಿ**

# ಭಾರೀ ಮಳೆ ಹಾಗೂ ಗಾಳಿ ಬೀಸಿದ್ದ ಪರಿಣಾಮ ಅಪಾರ ಪ್ರಮಾಣದ ಹಾನಿ: ಪಿ.ಎಚ್.ಪೂಜಾರ ಭೇಟಿ



**ಬಾಗಲಕೋಟೆ :** ಗುರುವಾರ ಸಂಜೆ ಭಾರೀ ಮಳೆ ಹಾಗೂ ಗಾಳಿ ಬೀಸಿದ್ದ ಪರಿಣಾಮ ಅಪಾರ ಪ್ರಮಾಣದ ಹಾನಿ ಸಂಭವಿಸಿದೆ.

ತಾಲೂಕಿನ ತುಳಸಿಗೇರಿ, ದೇವನಾಳ, ಸಂಶಿ, ಶೆಲ್ಲಿಕೇರಿ, ಛಬ್ಬಿ, ಚಿಕ್ಕ ಶೆಲ್ಲಿಕೇರಿ, ಹಿರೇಸಂಶಿ ಸೇರಿದಂತೆ ಹಲವೆಡೆಗಳಲ್ಲಿ ಸಂಜೆ ಬೀಸಿದ ಗಾಳಿ, ಮಳೆಗೆ ಮನೆಯ ಮೇಲ್ಛಾವಣಿ, ಶೆಡ್ಡುಗಳು ಹಾರಿ ಹೋಗಿದ್ದು ಅನೇಕ ಮರಗಳು ಧರೆಗೆ ಉರುಳಿದ್ದು, ತೋಟಗಾರಿಕೆ ಬೆಳೆಗಳು ಹಾನಿಯಾಗಿವೆ.

ಕಬ್ಬು, ದಾಳಿಂಬೆ, ಸಪೋಟಾ, ಗಂಧದಮರಗಳು ಹಾನಿಗೆ ಒಳಗಾಗಿದ್ದು ಹಿರೇಶೆಲ್ಲಿಕೇರಿಯಲ್ಲಿ ಎರಡು ಎಮ್ಮೆಗಳು ಸಾವನ್ನಪ್ಪಿವೆ. ಗಾಳಿ ಮಳೆಯಿಂದಾಗಿ ತುಳಸಿಗೇರಿಯ ಮಾರುತೇಶ್ವರ ದೇವಸ್ಥಾನದ ಮುಂಭಾಗದಲ್ಲಿದ್ದ ಹಾಗೂ ರಾಮಾರೂಢ ಮಠದಿಂದ ದೇವನಾಳ ಆರ್‌ಸಿ ವರೆಗೆ ಇದ್ದ ಹಳೆಯ ದೊಡ್ಡ ದೊಡ್ಡ ಮರಗಳು ನೆಲಕ್ಕುರುಳಿವೆ. 3 ಟ್ರಾನ್ಸಪಾರಂ(ಟಿಸಿ) ಸೇರಿದಂತೆ ಹತ್ತಾರು ವಿದ್ಯುತ್‌ಕಂಬಗಳು ಬಿದ್ದಿವೆ. ಹಾನಿಗೊಳಗಾದ ಪ್ರದೇಶಗಳಿಗೆ ಇಂದು ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ ಭೇಟಿ ನೀಡಿ ಪರಿಶೀಲಿಸಿದರು. ಅಲ್ಲಿಯ ರೈತರೊಂದಿಗೆ ಚರ್ಚೆ ನಡೆಸಿ, ಪರಿಹಾರ ಕೊಡಿಸುವುದಾಗಿ ಭರವಸೆ ನೀಡಿದರು. ಸ್ಥಳದಲ್ಲಿಯೇ ಇದ್ದ ತಹಶೀಲ್ದಾರ್ ಅಮರೇಶ ಪಮ್ಮಾರ ಹಾಗೂ ತೋಟಗಾರಿಕೆ ಅಧಿಕಾರಿಗಳಿಗೆ ಹಾನಿ ಬಗ್ಗೆ ವಿಸ್ತೃತ ಚರ್ಚಿಸಿ ಸರ್ಕಾರಕ್ಕೆ ವರದಿ ನೀಡಬೇಕೆಂದು ಹೇಳಿದರು.

# ಭಾರತೀಯ ಸಂಸ್ಕೃತಿ ಮನೆ ಮನೆಗಳಲ್ಲಿ ನೆಲೆಯೂರಲಿ: ಸಪ್ನಾ ಅನಿಗೋಳ



**ಮಹಾಲಿಂಗಪುರ :** ನಮ್ಮ ಮನೆಯ ಸಂಸ್ಕಾರಗಳಲ್ಲಿ ಅಧ್ಯಾತ್ಮ ಇದೆ. ಈ ಅಧ್ಯಾತ್ಮವು ವಿಜ್ಞಾನವನ್ನು ಒಳಗೊಂಡಿದೆ. ಇವುಗಳ ಆಧಾರ ಸ್ತಂಭವಾಗಿ ಇರಿಸಿಕೊಂಡು ಭಾರತೀಯ ಸಂಸ್ಕೃತಿ ಮನೆ ಮನೆಗಳಲ್ಲಿ ನೆಲೆಯೂರಬೇಕಾದರೆ ಆಧುನಿಕ ಮಹಿಳೆಯ ಪಾತ್ರ ಬಹಳ ಮುಖ್ಯವಿದೆ ಎಂದು ಕೆಎಲ್‌ಇ ಪ್ರೌಢಶಾಲೆಯ ಶಿಕ್ಷಕಿ ಸಪ್ನಾ ಅನಿಗೋಳ ಹೇಳಿದರು.

ಸಮೀಪದ ರನ್ನಬೆಳಗಲಿಯ ಅಡವೇಶ್ವರ ಶಿರೋಳ (ಅದೃಶಿ) ಅವರ ತಪೋವನ ಶಿರೋಳ ತೋಟದಲ್ಲಿ ಜ್ಞಾನಯಜ್ಞ ಸಪ್ತಾಹ ಅಂಗವಾಗಿ ಆಯೋಜಿಸಿದ್ದ ಮಹಿಳಾ ಗೋಷ್ಠಿಯಲ್ಲಿ ಆಧುನಿಕಯುಗದಲ್ಲಿ ಮಹಿಳೆಯರಲ್ಲಿ ಅಧ್ಯಾತ್ಮಿಕ ಮನೋಭಾವ ಕುರಿತು ಮಾತನಾಡಿದರು.

ಉಡುಗೆ-ತೊಡುಗೆ, ಹಬ್ಬ-ಹರಿದಿನ, ನಮ್ಮ ರೀತಿ-ರಿವಾಜುಗಳಲ್ಲಿ ಅಧ್ಯಾತ್ಮ ಇದ್ದರೆ ಅದಕ್ಕೆ ವಿಜ್ಞಾನದ ತಳಹದಿ ಇದೆ. ಇದಕ್ಕೆ ಆರೋಗ್ಯ, ಪರಿಸರಕ್ಕೆ ಪೂರಕವಾಗಿ ನಿಂತಿವೆ ಎಂದರು.

ರನ್ನಬೆಳಗಲಿ ಶಂಭುಲಿಂಗ ಆಶ್ರಮದ ಕಾಶಿಬಾಯಿ ಪುರಾಣಿಕ, ಶಿಕ್ಷಕಿ ಅಕ್ಕತಾಯಿ ಕಿಚಡಿ, ಶಿಕ್ಷಕ ಬಸವರಾಜ ಮೇಟಿ ಉಪನ್ಯಾಸ ನೀಡಿದರು. ಪ್ಲಾಸ್ಟಿಕ್ ತ್ಯಜಿಸಿ ಕಾಟನ್ ಚೀಲ ಬಳಸಿ ಅಭಿಯಾನ ಅಂಗವಾಗಿ ಕಾಟನ್ ಬಟ್ಟೆ ಚೀಲಗಳನ್ನು ಶಿಕ್ಷಕ ಶಿವಲಿಂಗ ಜುಟನಟ್ಟಿ ವಿತರಿಸಿದರು. ನಾಲ್ವರು ಶರಣ ದಂಪತಿಗಳನ್ನು ಸನ್ಮಾನಿಸಲಾಯಿತು. ಅಡಿವೆಪ್ಪ ಮಹಾರಾಜರು ಶಿರೋಳ (ಅದೃಶಿ) ನೇತೃತ್ವ ವಹಿಸಿದ್ದರು. ಅವರಾದಿಯ ಮಲ್ಲಪ್ಪ ಮಹಾರಾಜರು, ತುಂಗಳದ ಲಕ್ಷ್ಮಣ ಮಹಾರಾಜರು, ನಂದಗಾಂವದ ಕಾಳಪ್ಪ ಮಹಾರಾಜರು, ಗಿರೀಶ ಶಿರೋಳ, ಮಹಾಲಿಂಗ ಶಿರೋಳ, ಷಣ್ಮುಖ ಶಿರೋಳ, ಗಜಾನನ ಶಿರೋಳ ಸೇರಿದಂತೆ ಹಲವರು ಇದ್ದರು.

"SIHI KAHI" Kannada Daily Morning, Editor, Owner, Publisher, Printer by MARUTI BASAVANTAPPA HOASAMANI Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at SUDIN PRINTERS, Sector No. 33, Shop No. 38 & 40, Opp. Ambedkar Bhavan, NAVANAGAR, BAGALKOT-587 101. Dist : Bagalkot, Karnataka State